ಸಂಪುಟ : 10 ಸಂಚಿಕೆ: 77 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 77 Pages : 4+2 Price : 3.00 Thursday April 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಭಯೋತ್ಪಾದಕ ದಾಳಿ ಹೇಯ ಕೃತ್ಯ

■ವಿಜಯಸಾಕ್ಷಿ ಸುದ್ದಿ, ಗದಗ



ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿ ಅತ್ಯಂತ ಬರ್ಬರವಾಗಿದೆ. ಉಗ್ರರ ಈ ಹೇಡಿ ಕೃತ್ಯವನ್ನು ಪ್ರತಿಯೊಬ್ಬರೂ ಬಲವಾಗಿ ಖಂಡಿಸಬೇಕು ಎಂದು ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಕೃತ್ಯಕ್ಕೆ ಕಾರಣರಾದ ಉಗ್ರಗಾಮಿಗಳನ್ನು ಮುಲಾಜಿಲ್ಲದೆ ಸದೆಬಡಿಯುವ ಕೆಲಸ ಆಗಬೇಕು. ನೂರಾರು ಜನ ಪ್ರವಾಸಿಗರು ಇದ್ದ ಜಾಗದಲ್ಲಿ ಭದ್ರತಾ ಸಿಬ್ಬಂದಿ ಇರಲಿಲ್ಲವೇ, ಸುರಕ್ಷತೆ ಇರಲಿಲ್ಲವೇ ಎಂಬ ಪ್ರಶ್ನೆ ಉದ್ಭವಿಸುತ್ತಿದೆ. ಕೇಂದ್ರ ಸರ್ಕಾರ ಮತ್ತು ಜಮ್ಮು-ಕಾಶ್ಮೀರ ರಾಜ್ಯ ಸರ್ಕಾರದ ನಿರ್ಲಕ್ಷ್ಯ ಮತ್ತು ಬೇಹುಗಾರಿಕೆ ವೈಫಲ್ಯವೇ ಉಗ್ರರ ದಾಳಿಗೆ ಪ್ರಮುಖ ಕಾರಣವಾಗಿದೆ.

ಕೇಂದ್ರ ಗೃಹ ಸಚಿವಾಲಯ ಜವಾಬ್ದಾರಿ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದೆ. ಹೀಗಾಗಿ ನೈತಿಕ ಹೊಣೆ ಹೊತ್ತು ಅಮಿತ್ ಶಾ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

## ಉಗ್ರವಾದಿಗಳ ಕೃತ್ಯ ಖಂಡನೀಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ಉಗ್ರವಾದಿಗಳು ನಡೆಸಿರುವ ಹೇಯ ಕೃತ್ಯಕ್ಕೆ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಮಂತ್ರಿ ಅಮಿತ್‌ಶಾ ತಕ್ಕ ಉತ್ತರ ನೀಡಲಿದ್ದಾರೆ ಎಂದು ಬಿಜೆಪಿಯ ಡಂಬಳ ಮಂಡಲದ ಅಧ್ಯಕ್ಷ ಅಂದಪ್ಪ ಹಾರೂಗೇರಿ ಹೇಳಿದರು.

ಗ್ರಾಮದ ಮುಖ್ಯ ಬಜಾರ್‌ದಲ್ಲಿ ಭಾರತೀಯ ಜನತಾ ಪಕ್ಷದ ಡಂಬಳ ಮಂಡಲದ ಕಾರ್ಯಕರ್ತರು ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಉಗ್ರರ ದಾಳಿಯಲ್ಲಿ ಹುತಾತ್ಮರಾದವರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ ಕ್ಯಾಂಡಲ್ ಬೆಳಗಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಮುದಲಿಂಗಪ್ಪ ಕೊರ್ಲಹಳ್ಳಿ, ಪ್ರಧಾನ ಕಾರ್ಯದರ್ಶಿ ಪಂಚಾಕ್ಷರಯ್ಯ ಹರ್ಲಾಪೂರಮಠ, ಮೈಲಾರಪ್ಪ ನೋಟಗಾರ, ಮಲ್ಲಪ್ಪ ಮಠ, ಯಮನೂರ ದೊಡ್ಡಮನಿ, ಬಸವರಾಜ ಬಂಡಿ, ಕರಿಯಪ್ಪ ಮುದಿಯಜ್ಜನವರ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಗವಿಸಿದ್ದಪ್ಪ ಮಠದ, ಫಕೀರಪ್ಪ ಆನಿ, ಸಿದ್ದಯ್ಯ ಕಾಡಸಿದೇಶ್ವರಮಠ, ಪ್ರಕಾಶ ಕೋತಂಬ್ರಿ, ಶಿವಬಸಪ್ಪ ಇಟಗಿ, ಶಿವಾನಂದ ಬಂಡಿ, ಮಂಜುನಾಥ ಬಿಸನಳ್ಳಿ, ಮುತ್ತು ಮಠದ, ಮೈಲಾರಪ್ಪ ನೋಟಗಾರ, ಪುಂಡಲೀಕ ಪಾರಪ್ಪನವರ, ಮಂಜುನಾಥ್ ಹೊಸಮನಿ, ಮಲ್ಲಪ್ಪ ಒಂಟಲಭೋವಿ, ಕುಬೇರಪ್ಪ ಕವಲಿ, ಕುಮಾರ ರಸಾಳಕರ, ಸಿದ್ದಪ್ಪ ಸೇರಿದಂತೆ ಕಾರ್ಯಕರ್ತರು, ಯುವಕರು ಇದ್ದರು.

### ಸಿಎಂ ಸಿದ್ದರಾಮಯ್ಯ ಸೂಚನೆ । ತೊಂದರೆಗೊಳಗಾದ ಕನ್ನಡಿಗರ ರಕ್ಷಣೆಗೆ ಕಾಶ್ಮೀರಕ್ಕೆ ತೆರಳಿದ ಸಚಿವ ಸಂತೋಷ್ ಲಾಡ್

# ಹೆದರದಿರಿ, ನಿಮ್ಮೊಂದಿಗೆ ನಾವಿದ್ದೇವೆ...

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆಯ ಮೇರೆಗೆ ಸಚಿವ ಸಂತೋಷ್ ಲಾಡ್ ಕಾಶ್ಮೀರಕ್ಕೆ ತೆರಳಿ ತೊಂದರೆಗೊಳಗಾದ ಕನ್ನಡಿಗರ ರಕ್ಷಣೆಗೆ ಮುಂದಾಗಿದ್ದಾರೆ. ಉಗ್ರರ ದಾಳಿಯಲ್ಲಿ ಮೃತಪಟ್ಟವರ ಗುರುತು ಪತ್ತೆಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಮೃತರ ಸಂಬಂಧಿಕರಿಗೆ ನೆರವು ನೀಡಿದ್ದಾರೆ.

ಪಹಲ್ಗಾಮ್‌ನಲ್ಲಿ ಮೃತದೇಹಗಳನ್ನು ಇರಿಸಲಾಗಿದ್ದು, ಮೃತರ ಸಂಬಂಧಿಕರೊಂದಿಗೆ ಪಾರ್ಥಿವ ಶರೀರಗಳನ್ನು ಗುರುತಿಸಲು ನೆರವಾಗಿ, ಮೃತದೇಹಗಳು ನಿಮ್ಮ ಸಂಬಂಧಿಕರದ್ದೇ ಎಂಬುದನ್ನು ಖಚಿತಪಡಿಸಿಕೊಳ್ಳಿ ಎಂದು ತಿಳಿಸಿದರಲ್ಲದೆ, ಎಷ್ಟು ಜನ ಬಂದಿದ್ದೀರಿ ಎಂಬ ಮಾಹಿತಿಯನ್ನು



ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರೊಂದಿಗೆ ಮಾತನಾಡಿದ ಸಚಿವ ಸಂತೋಷ್ ಲಾಡ್, ರಕ್ಷಣಾ ಕಾರ್ಯದ ಬಗ್ಗೆ ವಿವರಣೆ ನೀಡಿದರು. ಉಗ್ರರ ದಾಳಿಯಲ್ಲಿ ಮೃತರಾದವರ ಪಾರ್ಥಿವ ಶರೀರವನ್ನು ಶ್ರೀನಗರದಲ್ಲಿ ಇರಿಸಲಾಗಿದ್ದು, ಈ ವೇಳೆ ಸಚಿವ ಸಂತೋಷ್ ಲಾಡ್ ಮೃತದೇಹಗಳಿಗೆ ನಮನ ಸಲ್ಲಿಸಿದರು.

ಕಲೆ ಹಾಕುತ್ತಿದ್ದಾರೆ. ಯಾವ ಮೃತದೇಹಗಳನ್ನು ಈಗಾಗಲೇ ನೋಡಲಾಗಿದೆ ಎಂಬುದನ್ನೂ ಸಹ ಅವರು ತಪಾಸಣೆ ಮಾಡುತ್ತಿದ್ದಾರೆ.

ಮೃತದೇಹಗಳನ್ನು ಇರಿಸಲಾಗಿರುವ ಪೆಟ್ಟಿಗೆಗಳ ಮೇಲೆ ದೂರವಾಣಿ ಸಂಖ್ಯೆಗಳನ್ನು ನಮೂದಿಸಲಾಗಿದ್ದು, ಸಂಬಂಧಿಕರಿಗೆ ಕರೆ ಮಾಡಿ ಸ್ವತಃ ಸಂತೋಷ್ ಲಾಡ್ ಅವರೇ ತಿಳಿಸುತ್ತಿದ್ದಾರೆ. 'ಮೃತದೇಹಗಳನ್ನು ಕರ್ನಾಟಕಕ್ಕೆ ತರಲು ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗುವುದು. ತೊಂದರೆಗೊಳಗಾದವರಿಗೆ ಅಗತ್ಯ ನೆರವನ್ನು ನೀಡಲಾಗುವುದು. ನಮ್ಮ ಸರ್ಕಾರ ಎಲ್ಲಾ ರೀತಿಯಲ್ಲಿ ಸಹಾಯ ಮಾಡಲಿದೆ' ಎಂದು ಲಾಡ್ ಅವರು ತಿಳಿಸಿದ್ದಾರೆ. ಪಹಲ್ಗಾಮ್‌ನಲ್ಲಿ ನಡೆದ ದಾಳಿಯಲ್ಲಿ ತೊಂದರೆಗೊಳಗಾಗಿರುವ ಕನ್ನಡಿಗ ಪ್ರವಾಸಿಗರು ಸಚಿವ ಸಂತೋಷ್ ಲಾಡ್ ಅವರ ಸಹಾಯಕ್ಕೆ ಧನ್ಯವಾದ ಹೇಳಿದ್ದಾರೆ. 'ಸಚಿವ ಲಾಡ್ ಅವರಿಗೆ ಬೆಳಿಗ್ಗೆ ಕರೆ ಮಾಡಿದ್ದೆ. ಅವರು



ಹತ್ತು ನಿಮಿಷದಲ್ಲಿ ಬರುತ್ತೇನೆ ಎಂದಿದ್ದರು. ಅವರು ಹೇಳಿದಂತೆ ತಮ್ಮ ತಂಡದೊಂದಿಗೆ ಇಲ್ಲಿಗೆ ಬಂದರು. ಎಲ್ಲಾ ಭದ್ರತಾ ಕ್ರಮಗಳನ್ನು ಕೈಗೊಂಡರು. ಸಂತೋಷ್ ಲಾಡ್ ಹಾಗೂ ಕರ್ನಾಟಕ ಸರ್ಕಾರ ಸದಾ ನಮ್ಮೊಂದಿಗೆ ಇದೆ ಎಂದು ಪ್ರವಾಸಿಗರೊಬ್ಬರು ಕರ್ನಾಟಕ ಸರಕಾರಕ್ಕೆ ಹಾಗೂ ಸಚಿವ ಲಾಡ್ ಅವರಿಗೆ ಧನ್ಯವಾದ ಹೇಳಿದ್ದಾರೆ. ಸಂತ್ರಸ್ತರಾಗಿರುವ ಕನ್ನಡಿಗ ಪ್ರವಾಸಿಗರಿಗೆ ಲಾಡ್ ಅವರು ಧೈರ್ಯ ಹೇಳಿ ಅವರ ಯೋಗಕ್ಷೇಮವನ್ನೂ ವಿಚಾರಿಸಿದರು. ಪಹಲ್ಗಾಮ್‌ನಲ್ಲಿ ಪ್ರವಾಸಿಗರನ್ನು ಗುರಿಯಾಗಿರಿಸಿಕೊಂಡು ನಡೆದ ದಾಳಿಯಲ್ಲಿ ಸಂತ್ರಸ್ತರಾದವರ ರಕ್ಷಣೆಗೆ ಕರ್ನಾಟಕದಿಂದ ಧಾವಿಸಿರುವ ಕಾರ್ಮಿಕ ಸಚಿವ ಸಂತೋಷ್ ಲಾಡ್, ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರಿಗೆ ವಿವರಣೆ ನೀಡಿದರು.

### ಹಿರಿಯ ನಾಗರಿಕರ ಕಾನೂನು ಸಾಕ್ಷರತಾ ಕಾಯಕ್ರಮದಲ್ಲಿ ನ್ಯಾ.ಮೂ ಸಿ.ಎಸ್. ಶಿವನಗೌಡ್ರ

# ಹಿರಿಯರ ನಿರ್ಲಕ್ಷ್ಯ ಸಲ್ಲದು

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಗಾಗಿ ದುಡಿದು, ಮಕ್ಕಳಿಗಾಗಿಯೇ ತಮ್ಮ ಇಡೀ ಜೀವನವನ್ನು ಸವೆಸಿದ ಹಿರಿಯರನ್ನು ಮಕ್ಕಳು ಸರಿಯಾಗಿ ನೋಡಿಕೊಳ್ಳದೇ ನಿರ್ಲಕ್ಷ್ಯ ವಹಿಸುವುದು ದುರ್ದೈವದ ಸಂಗತಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾಯದರ್ಶಿ, ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್. ಶಿವನಗೌಡ್ರ ನುಡಿದರು.

ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಗದಗ, ಜಿಲ್ಲಾ ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಗದಗ, ಶ್ರೀ ಸಿದ್ಧೇಶ್ವರ ವಿದ್ಯಾಪೀಠ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಎಸ್.ಪಿ ಕಚೇರಿ ಗದಗ ಹಾಗೂ ಜೀವನ ಜ್ಯೋತಿ ಶಿವರತ್ನ ವೃದ್ಧಾಶ್ರಮ ಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಹಿರಿಯ ನಾಗರಿಕರಿಗಾಗಿ ಕಾನೂನು ಸಾಕ್ಷರತಾ ಕಾಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯಾವ ತಂದೆ-ತಾಯಿಯೂ ಮಕ್ಕಳಿಗೆ ಕೆಟ್ಟದ್ದನ್ನು ಬಯಸುವುದಿಲ್ಲ, ದ್ರೋಹ ಮಾಡುವುದಿಲ್ಲ. ಅಂತಹ ತಂದೆ-ತಾಯಂದಿರನ್ನು ಮಕ್ಕಳು ವಿವಿಧ ಕಾರಣಗಳಿಂದ



ಮನೆಯಿಂದ ಹೊರಹಾಕುವುದು, ಹಗೆ ಸಾಧಿಸುವ ಕೆಲಸ ಮಾಡಬಾರದು. ಹಿರಿಯರಿಗಾಗಿ ಸರ್ಕಾರದಿಂದ ಸಾಕಷ್ಟು ಸೌಲಭ್ಯಗಳಿವೆ. ಹಾಗೆಯೇ ಅವರ ರಕ್ಷಣೆಗೆ ಕಾನೂನುಗಳು ಸಹ ಇವೆ ಎಂದು ತಿಳಿಸಿದರಲ್ಲದೆ, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ (ಹಿರಿಯ ನಾಗರಿಕರಿಗೆ ಕಾನೂನು ಸೇವೆಗಳ) ಯೋಜನೆ 2016ರ ಕುರಿತು ಹಾಗೂ ಹಿರಿಯ ನಾಗರಿಕರ ಕಾಯ್ದೆ 2007ರ ಕುರಿತು ಮಾಹಿತಿ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಮಹಾಂತೇಶ ಕೆ ಮಾತನಾಡಿ, ಹಿರಿಯ ನಾಗರಿಕರು ಕಾನೂನು ತೊಡಕಿನಿಂದ ಹೊರಬರಬೇಕು. ಅವರಿಗೆ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಬೇಕು. ಈ ನಿಟ್ಟಿನಲ್ಲಿ ಈ ಕಾಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾಯಕ್ರಮದ ಅಧ್ಯಕ್ಷತೆಯನ್ನು ಜೀವನಜ್ಯೋತಿ ಶಿವರತ್ನ ವೃದ್ಧಾಶ್ರಮದ ನಿರ್ದೇಶಕರು ಹಾಗೂ ವಕೀಲರಾದ ಮಂಜುನಾಥ ಶಿವಣ್ಣ ಮುಳಗುಂದ ವಹಿಸಿದ್ದರು. ಕಾರ್ಯಕ್ರಮವನ್ನು ಹಿರಿಯ ನಾಗರಿಕರ ಸಹಾಯವಾಣಿಯ ಆಪ್ತ ಸಮಾಲೋಚಕರಾದ ಸವಿತಾ ನಿರೂಪಿಸಿದರು. ಜೀವನಜ್ಯೋತಿ ವೃದ್ಧಾಶ್ರಮದ ವಾರ್ಡನ್ ಮಂಜುಳಾ ಹಾಗೂ ಹಿರಿಯ ನಾಗರಿಕರ ಸಹಾಯವಾಣಿ ಸಿಬ್ಬಂದಿವರ್ಗದವರು ಪಾಲ್ಗೊಂಡಿದ್ದರು.

### ಭಯೋತ್ಪಾದಕ ದಾಳಿಯಲ್ಲಿ ಮೃತರಾದವರಿಗೆ ಹಿಂದೂ ಪರ ಸಂಘಟನೆಗಳಿಂದ ಶ್ರದ್ಧಾಂಜಲಿ

# ಹಿಂದೂಗಳ ಮೇಲಿನ ಆಕ್ರಮಣ ಅಕ್ಷಮ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಮ್ಮು ಕಾಶ್ಮೀರದ ಪಹಲ್ಗಾಮ್ ಜಿಲ್ಲೆಯಲ್ಲಿ ಹಿಂದೂಗಳ ಮೇಲೆ ನಡೆದ ಅಮಾನವೀಯ ದಾಳಿಯಲ್ಲಿ ಹುತ್ಮಾತರಾದ ಭಾರತೀಯರಿಗೆ ಹಾಗೂ ವಿದೇಶಿ ಪ್ರಜೆಗಳಿಗೆ ಪಟ್ಟಣದ ವಿವಿಧ ಹಿಂದೂ ಪರ ಸಂಘಟನೆಗಳ ನೂರಾರು ಕಾರ್ಯಕರ್ತರು ಬುಧವಾರ ಪಟ್ಟಣದ ಹಾವಳಿ ಹನುಮಂತದೇವರ ದೇವಸ್ಥಾನದ ಹತ್ತಿರ ದೀಪ ಬೆಳಗಿಸಿ, ಶ್ರದ್ಧಾಂಜಲಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್ ತಾಲೂಕಾಧ್ಯಕ್ಷ ಬಸವರಾಜ ಅರಳಿ, ಶ್ರೀರಾಮಸೇನಾ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಹಿಂದೂ ಮಹಾಸಭಾ ಗಣಪತಿ ಅಧ್ಯಕ್ಷ ಫಕ್ಕೀರೇಶ ಅಣ್ಣಿಗೇರಿ, ರವಿ ಪುರಾಣಿಕಮಠ ಮಾತನಾಡಿ, ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿ ಅತ್ಯಂತ ಹೇಯ ಮತ್ತು ಬರ್ಬರವಾಗಿದೆ.



ಉಗ್ರರ ಈ ಹೇಡಿ ಕೃತ್ಯವನ್ನು ಪ್ರತಿಯೊಬ್ಬರೂ ಬಲವಾಗಿ ಖಂಡಿಸಬೇಕು.

ಇಂತಹ ಹೇಯ ಕೃತ್ಯಕ್ಕೆ ಭಾರತ ಶೀಘ್ರ ತಕ್ಕ ಉತ್ತರ ನೀಡಲಿದೆ. ಭಾರತದಲ್ಲಿನ ಹಿಂದೂಗಳ ಮೇಲೆ ಆಕ್ರಮಣ ನಡೆಸಿದರೆ ಯಾವುದೇ ಕಾರಣಕ್ಕೂ ಕ್ಷಮಿಸಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇನ್ನು ಮುಂದೆ ಭಯೋತ್ಪಾಕದರ ಮೇಲೆ ಯಾವುದೇ ಕರುಣೆ ಇಲ್ಲದೆ ಅವರನ್ನು ಮುಗಿಸುವ ತನಕ ಭಾರತ ವಿರಮಿಸುವಂತಿಲ್ಲ. ದಾಳಿಯಲ್ಲಿ ಹಿಂದೂಗಳೇ ಎನ್ನುವದನ್ನು ಖಚಿತಪಡಿಸಿಕೊಂಡು ಹತ್ಯೆ ಮಾಡಲಾಗಿದ್ದು,

ಈ ಹೇಯ ಕೃತ್ಯವನ್ನು ಸಮಸ್ತ ಹಿಂದೂ ಸಮಾಜ ಖಂಡಿಸುತ್ತದೆ. ಉಗ್ರರ ಗುಂಡಿಗೆ ಬಲಿಯಾದವರಿಗೆ ಸಮಸ್ತ ಹಿಂದೂ ಸಮಾಜದ ಪರವಾಗಿ ಶ್ರದ್ಧಾಂಜಲಿ ಅರ್ಪಿಸುತ್ತೇವೆ.

ಅವರ ಕುಟುಂಬದ ದುಃಖದಲ್ಲಿ ಹಿಂದೂ ಸಮಾಜವು ಭಾಗಿಯಾಗಿದೆ, ಅವರಿಗೆ ಪರಮಾತ್ಮ ಸದ್ಗತಿ ನೀಡಲಿ ಎಂದು ಪ್ರಾರ್ಥಿಸುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ನವೀನ ಕುಂಬಾರ, ಮಂಜುನಾಥ ಮುಳುಗುಂದ, ಹನುಮಂತ ರಾಮಗೇರಿ, ಪ್ರವೀಣ ಬನ್ನಿಕೊಪ್ಪ, ಜಗದೀಶ್ ಗೋಡಿ, ಪ್ರವೀಣ ಕುಂಬಾರ, ಬಸವರಾಜ ಹಳ್ಳಿಕೇರಿ, ಚಂದ್ರು ಕರ್ಜಕಣ್ಣವರ, ಗಣೇಶ ಕುಂಬಾರ, ಅಭಿಷೇಕ ಕ್ಯಾದಿಗೇರಿ, ಈರಣ್ಣ ಶೆಟ್ಟಿಕೇರಿ ಸೇರಿದಂತೆ ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು ಇದ್ದರು.

### ಪತ್ರಿಕಾಗೋಷ್ಠಿಯಲ್ಲಿ ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿಯ ಬಸವರಾಜ ದೇಸಾಯಿ ಮಾಹಿತಿ

# ಏ.25ರಂದು ರೈಲ್ವೆ ಮಾರ್ಗಕ್ಕಾಗಿ ಹೋರಾಟ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಮುಂಡರಗಿ-ಹರಪನಹಳ್ಳಿ ರೈಲ್ವೆ ಮಾರ್ಗಕ್ಕೆ ಒತ್ತಾಯಿಸಿ ಎಪ್ರಿಲ್ 25ರಂದು ಮುಂಡರಗಿಯಿಂದ ಗದಗವರೆಗೆ ರೈಲ್ವೆ ಎಂಜಿನ್ ಚಿತ್ರದ ಅಣುಕು ಪ್ರದರ್ಶನದ ವಿನೂತನ ಹೋರಾಟ ಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿ ಅಧ್ಯಕ್ಷ ಬಸವರಾಜ ದೇಸಾಯಿ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಏ. 25ರಂದು ಬೆಳಿಗ್ಗೆ ಮುಂಡರಗಿಯ ಗಣೇಶ ದೇವಸ್ಥಾನದಿಂದ ಯಾತ್ರೆ ಆರಂಭವಾಗಲಿದೆ. ಮಧ್ಯಾಹ್ನ 2 ಗಂಟೆಗೆ ಗದಗ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ರೈಲ್ವೆ ನಿಲ್ದಾಣಕ್ಕೆ ತೆರಳಿ, ರೈಲ್ವೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು. ಆನಂತರ




ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ, ಕೇಂದ್ರ ರೈಲ್ವೆ ಸಚಿವರು, ರಾಜ್ಯ ರೈಲ್ವೆ ಸಚಿವರು ಹಾಗೂ ಸಂಸದರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಈ ಹೋರಾಟಕ್ಕೆ ರೈತರು, ದಲಿತ ಪರ ಸಂಘಟನೆಗಳು, ಬೀದಿ ಬದಿ ವ್ಯಾಪಾರಸ್ಥರು, ಕಾರ್ಮಿಕರು, ಮಹಿಳಾ ಒಕ್ಕೂಟದ ಸದಸ್ಯರು ಬೆಂಬಲ ಸೂಚಿಸಿದ್ದಾರೆ. ಇದೊಂದು ಪಕ್ಷಾತೀತ ಹೋರಾಟವಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ವಿನಂತಿಸಿದರು. 2014ರಲ್ಲಿ ಡಿ.ವಿ. ಸದಾನಂದಗೌಡ ರೈಲ್ವೆ ಖಾತೆ ಮಂತ್ರಿಯಾಗಿದ್ದಾಗ ಗದಗ-ಮುಂಡರಗಿ-ಹರಪನಹಳ್ಳಿ ರೈಲ್ವೆ ಮಾರ್ಗಕ್ಕೆ ಅನುಮೋದನೆ ಕೊಟ್ಟಿದ್ದರು. ಆದರೆ ಮುಂದೆ ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದ ಆ ಯೋಜನೆ ನನೆಗುದಿಗೆ ಬಿದ್ದಿದೆ. ಈ ಮಾರ್ಗದ ಅನುಷ್ಠಾನದಿಂದ ಈ ಭಾಗದ ವ್ಯಾಪಾರ, ವಾಣಿಜ್ಯ ಮತ್ತು ಪ್ರವಾಸೋದ್ಯಮ ಬೆಳವಣಿಗೆಯಾಗಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಎಲ್. ನಾರಾಯಣಸ್ವಾಮಿ, ಶಿವರಾಜ ಹೊಸಕೋಟಿ, ಈರಮ್ಮ ತಾಳಿಕೋಟಿ, ಲೋಹಿತಕುಮಾರ ಕಾಸಾರ, ಮುತ್ತಣ್ಣ ಪವಾಡಶೆಟ್ಟಿ, ವಾದಿರಾಜ ಕೌಜಲಗಿ, ಶ್ರೀಪಾದ ತಮ್ಮಣ್ಣವರ ಉಪಸ್ಥಿತರಿದ್ದರು.

ಶ್ರೀರಾಮ ಸೇನೆ ಮುಖಂಡ ರಾಜು ಖಾನಪ್ಪನವರ ಮಾತನಾಡಿ, ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದವರು. ಪ್ರಧಾನಿ ಮೋದಿಯವರೊಂದಿಗೆ ನಿಕಟ ಸಂಪರ್ಕ ಹೊಂದಿದ್ದಾರೆ. ಹೀಗಾಗಿ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ನೂತನ ರೈಲ್ವೆ ಮಾರ್ಗದ ಅನುಷ್ಠಾನಕ್ಕೆ ಪ್ರಯತ್ನಿಸಬೇಕು. ರೈಲ್ವೆ ಹೋರಾಟಕ್ಕೆ ಶ್ರೀರಾಮ ಸೇನೆ ಸಂಪೂರ್ಣ ಬೆಂಬಲ ನೀಡಲಿದೆ ಎಂದರು.

## ಸಂಪಾದಕೀಯ

# ಉಗ್ರರ ದಾಳಿ ಖಂಡನೀಯ

ಕಣಿವೆ ರಾಜ್ಯ ಜಮ್ಮು ಕಾಶ್ಮೀರದಲ್ಲಿ ಮತ್ತೊಮ್ಮೆ ನೆತ್ತರು ಹರಿದಿದೆ. ಪ್ರವಾಸಿಗರನ್ನ ಗುರಿಯಾಗಿಸಿಕೊಂಡು ಉಗ್ರರು ನಡೆಸಿದ ದಾಳಿಯಲ್ಲಿ 25ಕ್ಕೂ ಹೆಚ್ಚು ಜನ ಪ್ರಾಣ ಕಳೆದುಕೊಂಡಿದ್ದಾರೆ. ಕರ್ನಾಟಕದ ಮೂವರು ಸೇರಿದಂತೆ ದೇಶದ ನಾನಾ ಭಾಗಗಳಿಂದ ಪ್ರವಾಸಕ್ಕೆಂದು ಹೋಗಿದ್ದ ಜನರು ಪ್ರಾಣಾರ್ಪಣೆ ಮಾಡಿದ್ದಾರೆ.

ಉಗ್ರರ ಈ ದಾಳಿ ಖಂಡನೀಯ. ಇಸ್ಲಾಮಿಕ್ ಭಯೋತ್ಪಾದನೆಯ ಅತ್ಯಂತ ಹೇಯ ಕೃತ್ಯ ಇದಾಗಿದೆ. ಉಗ್ರರ ಕೃತ್ಯಕ್ಕೆ ದೇಶಾದ್ಯಂತ ಆಕ್ರೋಶ ವ್ಯಕ್ತವಾಗಿದೆ. ಸಂಯಮ ಸಾಕು, ಪ್ರತಿರೋಧ ಬೇಕು ಎನ್ನುವ ಕೂಗು, ದೇಶದ ಜನರಲ್ಲಿ ಮೂಡಿದೆ. ಉಗ್ರರ ಕೃತ್ಯಕ್ಕೆ ಇಡೀ ದೇಶವೇ ಕಂಬನಿ ಮಿಡಿದಿದೆ.

ಪುಲ್ವಾಮಾ ದಾಳಿಯ ನಂತರ ಉಗ್ರರ ನಡೆಸಿದ ಅತ್ಯಂತ ದೊಡ್ಡ ದಾಳಿ ಇದಾಗಿದೆ.

ಅವತ್ತು ಸೇನಾ ಪಡೆಗಳನ್ನ ಗುರಿಯಾಗಿಸಿಕೊಂಡು ದಾಳಿ ನಡೆದಿತ್ತು. ಇವತ್ತು ಮುಗ್ಧ ಪ್ರವಾಸಿಗರನ್ನ ಗುರಿಯಾಗಿಸಿಕೊಂಡು ಉಗ್ರರು ದುಷ್ಕೃತ್ಯ ಎಸಗಿದ್ದಾರೆ.

ಉಗ್ರರು ಪ್ರವಾಸಿಗರ ಮೇಲೆ ದಾಳಿ ನಡೆಸುವಾಗ ನಿಮ್ಮ ಧರ್ಮ ಯಾವುದು ಎಂದು ಕೇಳಿ ಗುಂಡು ಹಾರಿಸಿದ್ದಾರೆಂದು ಪ್ರವಾಸಿಗರು ಹೇಳಿದ್ದಾರೆ ಎನ್ನುವ ವರದಿಗಳು ಬರುತ್ತಿವೆ. ಸಹಜವಾಗಿ ಮುಸ್ಲಿಂ ಧರ್ಮದ ಮೇಲೆ ಆಕ್ರೋಶ ವ್ಯಕ್ತವಾಗಲು ಕಾರಣವಾಗಿದೆ. ಉಗ್ರರ ಇಸ್ಲಾಂ ಧರ್ಮದ ಅನುಯಾಯಿಗಳೆ ಆಗಿರಲಿ. ಸರ್ಕಾರ ನಿರ್ಧಾಕ್ಷಿಣ್ಯ ಕ್ರಮಗಳನ್ನು ಕೈಗೊಳ್ಳಲಿ.

ಕಣಿವೆ ರಾಜ್ಯದಲ್ಲಿ ನಡೆದ ಈ ಗುಂಡಿನ ದಾಳಿ, ಭಯೋತ್ಪಾದನೆಯನ್ನ ಬುಡ ಸಹಿತ ಕಿತ್ತು ಹಾಕಲು ನಾಂದಿಯಾಗಲಿ.

ಕೇವಲ ಪ್ರತಿಕಾರಕ್ಕಾಗಿ ದಾಳಿ ನಡೆಸುವುದಕ್ಕಿಂತ, ಭಯೋತ್ಪಾದನೆಯನ್ನ ಸಂಪೂರ್ಣ ನಿರ್ನಾಮ ಮಾಡುವ ಕಡೆಗೆ ಸರ್ಕಾರ ಗಂಭೀರ ಕ್ರಮಗಳನ್ನು ಕೈಗೊಳ್ಳಲಿ.


### ಚಳಿಯಲ್ಲಿ ಬೆಚ್ಚಗೆ, ಬೇಸಿಗೆಯಲ್ಲಿ ತಂಪಾಗಿ ಹಿತ ನೀಡುವ ಕೌದಿ ಇನ್ನು ನೆನಪಷ್ಟೇ

# ಕಣ್ಮರೆಯಾದ ನಾ ಕಂಡ 'ಕೌದಿ'

ಆಗ ನಾನು ಇನ್ನೂ ಚಿಕ್ಕವಳು. ನಮ್ಮ ಊರಿನ ಶಾಲೆಯೊಂದರಲ್ಲಿ ಓದುತ್ತಿದೆ. ಜನ ಹಂತ ಹಂತವಾಗಿ ಆಧುನಿಕತೆಯತ್ತ ಮುಖ ಮಾಡುತ್ತಿದ್ದ ಕಾಲ. ಊರಿನ ಗೌಡರು ಹಳ್ಳಿ ಬಿಟ್ಟು ಶಹರದತ್ತ ಮುಖ ಮಾಡಿದ್ದರು. ಅಲ್ಲಿ ಸಿಗುವ ವಸ್ತುಗಳಿಗೆ ಮಾರುಹೋಗಿದ್ದರು. ಶ್ರೀಮಂತ ವರ್ಗದವರೆಲ್ಲ ವಿದೇಶಿ ವ್ಯಾಮೋಹಕ್ಕೆ ಒಳಗಾಗಿದ್ದರು. ನಮ್ಮಂತಹ ಮಧ್ಯಮ ವರ್ಗದವರ ಮನೆಯಲ್ಲೂ ಆಧುನಿಕ ಉಪಕರಣಗಳ ಬಳಕೆ ಜೋರಾಗಿ ನಡೆಯುತ್ತಿತ್ತು. ಅಜ್ಜ-ಅಜ್ಜಿಯ ಕಾಲದಿಂದಲೂ ಬಂದ ಸಂಪ್ರದಾಯ, ಆಚಾರ, ವಿಚಾರ, ವಸ್ತುಗಳು ಇನ್ನು ಪ್ರಯೋಜನ ಇಲ್ಲ ಎಂದು ಭಾಸವಾಗುತ್ತಿತ್ತು.

ಮಣ್ಣಿನ ಮಡಿಕೆ, ಹಂಚಿನ ಮನೆ, ಬಿದಿರಿನ ಬುಟ್ಟಿ, ಸಗಣಿ ಕುಳ್ಳು, ಮರದ ಗೃಹೋಪಯೋಗಿ ವಸ್ತುಗಳು, ಮಣ್ಣಿನ ಒಲೆ, ನೀರು ಕುಡಿಯಲು ಉಪಯೋಗಿಸುವ ಸಿಮೆಂಟಿನ ಡೋಣಿ, ಮರದಿಂದ ಮಾಡಿದ ಮಕ್ಕಳ ಆಟಿಕೆಗಳಾದ ತಳ್ಳೋ ಗಾಡಿ ಬಂಡಿ, ಮರದ ತೊಟ್ಟಿಲುಗಳು ಹೀಗೆ ಅನೇಕ ಆಚಾರಗಳು, ಸಂಪ್ರಾಯಗಳು, ಹಳೆಯ ವಸ್ತುಗಳು ಆಧುನಿಕತೆಯ ಅಬ್ಬರದಲ್ಲಿ ಕಣ್ಮರೆಯಾಗಿವೆ.

ಹೀಗೇ ಹಳ್ಳಿಯಲ್ಲಿ ಪ್ರತಿದಿನ ಬಳಸುವ ಹಾಸಿಗೆಯಲ್ಲಿ ಪ್ರಮುಖವಾದದ್ದು



ಅಜ್ಜಿ ಹೊಲಿಯುವ ಕೌದಿಯೂ ಆಗಿತ್ತು. ಹಳೆ ಬಟ್ಟೆಗಳಿಂದ ಚಿತ್ರದ ಮೂಲಕ ಅಲಂಕಾರಿಕ ವಿನ್ಯಾಸವನ್ನು ಜೋಡಿಸಿ ಸುಂದರವಾದ ಕೌದಿಯನ್ನು ತಯಾರಿಸುತ್ತಿದ್ದರು. ಕೌದಿಯಲ್ಲಿ ನಾನಾ ಬಗೆಯ ಕಸೂತಿಯ ಚಿತ್ರಗಳನ್ನು ವಿನ್ಯಾಸಗೊಳಿಸಿ, ಸುಂದರವಾದ ಕೌದಿಯನ್ನು ಅಜ್ಜಿ ಹೊಲಿಯಲು ಆಂಭಿಸಿದರೆ, ನಾವು ಅಜ್ಜಿಯ ಸುತ್ತಲೂ ಕುಳಿತು ಅಜ್ಜಿ ಜೋಡಿಸುತ್ತಿದ್ದ ಹರಿದ ಅಂಗಿಯನ್ನು ಅದು ನಂದು, ಇದು ನಿಂದು ಎಂದು ಜಗಳವಾಡುತ್ತಾ ಗಲಾಟೆ ಮಾಡಿ ಅಜ್ಜಿ ಕಡೆಯಿಂದ ಬೈಸಿಕೊಂಡ ನೆನಪು.

ಇದರಲ್ಲಿ ಅವ್ವನ ವಯಸ್ಸಾದ ಪ್ರೀತಿಯ ಸೀರೆ, ಅಪ್ಪನ ಹಳೆಯ ಪಂಚೆ, ಅಜ್ಜಿಯ ಮಾಸಿದ ರವಿಕೆ, ತಂಗಿ ಅಂಗಿಯ ಚುಂಗು ಹೀಗೆ, ಮನೆಯಲ್ಲಿರುವ ಎಲ್ಲರ ಬಟ್ಟೆಯ ಚೂರು ಚೂರು ಸೇರಿಸಿ ಹೊಲಿದು ಮಾಡುವುದೇ ಕೌದಿ. ಎಷ್ಟು ಚೆಂದ ಅಲ್ಲವೇ! ಮೊದಲ ಬಾರಿಗೆ ಉಟ್ಟುಕೊಂಡ ಅಕ್ಕನ ಚೂಡಿದಾರ್ ನಂತರ ಕೌದಿಯಾದ ಆ ನೆನಪು ಜೀವಂತವಾಗಿರುತ್ತದೆ. ತೀರಿ ಹೋದ ಅಜ್ಜನ ನೆನಪು ಧೋತರದಲ್ಲಿ ಅವಿತಿಟ್ಟುಕೊಂಡು ಕೌದಿ ಹೊದ್ದುಕೊಂಡಾಗಲೆಲ್ಲ ಅಜ್ಜನ ಬಳಿ ಕುಳಿತು ಕತೆ, ಪುರಾಣಗಳನ್ನು ಕೇಳಿದ ಆ ದಿನಗಳ ನೆನಪು ಮಾತ್ರ.

ಮಕ್ಕಳನ್ನು ತೊಟ್ಟಿಲಿನಲ್ಲಿ ಬೆಚ್ಚಗೆ ಮಲಗಿಸಲು ಸಹ ಕೌದಿ ಸಹಾಯ ಮಾಡುತ್ತದೆ. ಚಳಿಯಲ್ಲಿ ಬೆಚ್ಚಗೆ, ಬೇಸಿಗೆಯಲ್ಲಿ ತಂಪಾಗಿ ಹಿತ ನೀಡುವ ಕೌದಿ ಇಡೀ ಉತ್ತರ ಕರ್ನಾಟಕದಲ್ಲೇ ಹೆಸರುವಾಸಿಯಾಗಿದೆ. ಆದರೆ ಕೌದಿ ಹೊಲಿದು ಜೀವನ ನಡೆಸಿ ಹೊಟ್ಟೆ ಊಟಕ್ಕೆ ದಾರಿಮಾಡಿಕೊಳ್ಳುತ್ತಿದ್ದ ನೂರಾರು ಕುಟುಂಬಗಳಿಗೆ ಇಂದು ಕೆಲಸವಿಲ್ಲದೆ ಬೇಸತ್ತು ಬೇರೆ ಕೆಲಸದಲ್ಲಿ ತೊಡಗಿ-ಕೊಂಡಿದ್ದಾರೆ. ಸಾಂಪ್ರದಾಯಿಕ ಕಸುಬು ನಂಬಿಕೊಂಡು ಬಂದವರು ಸಂಕಷ್ಟದ ಕುಲುಮೆಯಲ್ಲಿ ಬೆಂದು ಬೇರೆ ಕೆಲಸದತ್ತ ಮುಖ ಮಾಡಿದ್ದಾರೆ.

ಉತ್ತರ ಕರ್ನಾಟಕದಲ್ಲಿ ಕೌದಿಗೆ ವಿಶೇಷ ಸ್ಥಾನವಿದ್ದು, ಹುಬ್ಬಳ್ಳಿಯ ಜಾತ್ರೆಯ ಸಂದರ್ಭದಲ್ಲಿ ಸಿದ್ಧಾರೂಢ ಅಜ್ಜನವರಿಗೆ ಕೌದಿ ಅಲಂಕಾರ ಮಾಡಿ ಪೂಜೆ ಸಲ್ಲಿಸುವುದು ರೂಢಿಗತವಾಗಿ ನಡೆದುಕೊಂಡು ಬಂದಿದೆ. ನಮ್ಮ ಅಜ್ಜಿ ಕೌದಿ ಹೊಲಿಯಲು ಆರಂಭಿಸಿದಾಗ, ಸೂಜಿ ಮನಿ ಕಾಣುತ್ತಿರಲ್ಲಿಲ್ಲ. ಮುಪ್ಪಾದ ವಯಸ್ಸು, ಆದರಿಂದ ಚಿಕ್ಕವರಿದ್ದಾಗ, ನಾ ಮುಂದು, ನೀ ಮುಂದು ಎಂದು ಗುದ್ದಾಡಿಕೊಂಡು ಅಜ್ಜಿಗೆ, ಸೂಜಿಗೆ ದಾರ ಹಾಕಿಕೊಟ್ಟ ನೆನಪು. ಆದರೆ ಈಗಿನ ಮಕ್ಕಳಿಗೆ ಕೌದಿ ಅಂದರೆ, ಅದು ಹೇಗೆ ಇರುತ್ತದೆ ಎಂದು ಪ್ರಶ್ನಿಸುತ್ತಾರೆ. ಈಗಿನ ಮಕ್ಕಳಿಗೆ ಕೌದಿಯ ಸೊಗಡು ತಿಳಿಯದೆ ಹೋಯಿತು. ಗ್ರಾಮಗಳಲ್ಲಿ ಕೌದಿಯನ್ನು ಹೊಲಿಸಲು ಸ್ವತಃ ಅವರ ಮನೆಗೆ ಹೋಗಿ ಕೊಟ್ಟು ಬರುತ್ತಿದ್ದರು. ಆದರೆ ಈಗಿನ ದಿನಗಳಲ್ಲಿ ಕೌದಿ ಹೊಲಿಯುವವರೆ ಮನೆ ಮನೆಗೆ, ಗ್ರಾಮಗಳಿಗೆ ಹೋಗಿ, ಕೌದಿ ಹೊಲಿದುಕೊಡುತ್ತೇವೆ, ಹಳೆಯ ಬಟ್ಟೆಗಳಿದ್ದರೆ ಕೊಡಿ ಎಂದು ಯಂತ್ರಗಳ ಮೂಲಕ ಹೊಲಿಯುತ್ತಾರೆ ಹೊರತು ಕೈಯಿಂದ ಹೊಲಿಯುವವರ ಸಂಖ್ಯೆ ಬೆರಳೆಣಿಕೆಯಷ್ಟು. ಬ್ಲಾಂಕೆಟ್, ಕಂಬಳಿ, ಹೊದಿಕೆ, ರಗ್, ಬೆಡ್‌ಶೀಟ್ ಮುಂತಾದವುಗಳಿಗೆ ಹೋಲಿಸಿದರೆ ಕೌದಿಯ ಬೆಲೆ ತುಂಬಾ ಕಡಿಮೆ. ಎಲ್ಲವೂ ಕಾರ್ಖಾನೆಗಳಲ್ಲಿ ಸಿದ್ಧವಾದರೆ, ಕೌದಿಯನ್ನ ಕೈಯಲ್ಲೇ ಹೊಲಿಯಬೇಕು. ಶ್ರಮಕ್ಕೆ ತಕ್ಕಂತೆ ಬೆಲೆ ನಿಗದಿ ಆಗುತ್ತಿಲ್ಲ. ಆದರಿಂದ ಕೌದಿಯು ಇನ್ನು ನೆನಪು ಮಾತ್ರ. ನೂರಾರು ವರ್ಷಗಳಿಂದ ಅಜ್ಜ, ಮುತ್ತಜ್ಜರ ಕಾಲದಿಂದಲೂ ಪಾಲಿಸಿಕೊಂಡು ಬಂದ ಕೌದಿ ಹೊಲಿಯುವ ಕಸುಬು ಕ್ರಮೇಣ ಕಡಿಮೆ ಆಗುತ್ತಿದೆ. ಮನೆಯಲ್ಲಿ ಅಜ್ಜಂದಿರು ಬಿಟ್ಟರೆ ನಂತರ ಮುಂಬರುವ ಪೀಳಿಗೆಯವರು ಕೌದಿ ಹೇಗೆ ಇರುತ್ತೆ ಎಂದು ಕೇಳುವಂತಾಗಿದೆ. ಕೌದಿ ಹೊಲಿಯುವತ್ತ ಆಸಕ್ತಿ ತೋರುತ್ತಿಲ್ಲ. ಓದು ಮುಗಿದ ಮೇಲೆ ದೊಡ್ಡವರಾದ ಕೂಡಲೇ ಬಹಳ ಮಂದಿ ಉದ್ಯೋಗ ಹುಡುಕಿಕೊಂಡು ದೂರದ ಪಟ್ಟಣ ಸೇರಿಕೊಳ್ಳುತ್ತಾರೆ. ಇನ್ನೂ ಕೌದಿಯ ಬಗ್ಗೆ ಅರಿಯುವುದು, ಹೊಲಿಯುವುದು ಹೇಗೆ, ಬಳಸುವುದಾದರೂ ಯಾರು ಎಂಬ ಆತಂಕವಾಗಿದೆ.

ಚಳಿಗಾಲಕ್ಕೆ ಬೆಚ್ಚಗೆ, ಬೇಸಿಗೆಗೆ ತಂಪು ನೀಡುವ ಕೌದಿ ಮನಸ್ಸಿಗೆ ಸಂತಸ ತರುವ ಕೌದಿ, ಆದರೆ... ಇಂದಿನ ದಿನಮಾನದಲ್ಲಿ ಕೌದಿ ನೆನಪು ಮಾತ್ರ.



**– ಮುತ್ತವ್ವ ಲ.ಹನಮಣ್ಣವರ.**
ಪ್ರಶಿಕ್ಷಣಾರ್ಥಿ, ವಾ.ಸಾ.ಸಂ
ಇಲಾಖೆ, ಧಾರವಾಡ.

## ಕ್ಷುಲ್ಲಕ ವಿಚಾರಕ್ಕೆ ಕಿರಿಕ್: ಯುವಕನಿಗೆ ಚಾಕು ಇರಿತ, ಸ್ಥಿತಿ ಗಂಭೀರ!

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕ್ಷುಲ್ಲಕ ವಿಚಾರಕ್ಕೆ ಇಬ್ಬರ ನಡುವೆ ನಡೆದ ಗಲಾಟೆಯು ವಿಕೋಪಕ್ಕೆ ತಿರುಗಿ ಓರ್ವನಿಗೆ ಚಾರು ಇರಿದಿರುವ ಘಟನೆ ಹುಬ್ಬಳ್ಳಿಯ ಹೊಸೂರಲ್ಲಿ ನಡೆದಿದೆ. ವಿಜಯ ಎಂಬಾತನೇ ಚಾಕು ಇರಿತಕ್ಕೆ ಒಳಗಾದ ಯುವಕ. ಸಂದೀಪ ಎಂಬಾತ ಚಾಕು ಇರಿದು ಪರಾರಿಯಾಗಿದ್ದಾನೆ.

ಗಾಯಾಳು ವಿಜಯ್ ನನ್ನು ಕಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದ್ದು, ಪರಿಸ್ಥಿತಿ ಗಂಭೀರವಾಗಿದೆ ಎನ್ನಲಾಗಿದೆ. ಕ್ಷುಲ್ಲಕ ವಿಚಾರಕ್ಕೆ ನಡೆದ ಗಲಾಟೆ ವಿಕೋಪಕ್ಕೆ ತಿರುಗಿ ಈ ಕೃತ್ಯ ನಡೆದಿದೆ.

# ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕರ ದಾಳಿ ಆಘಾತಕಾರಿ- ಪ್ರಹ್ಲಾದ್ ಜೋಶಿ!

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕಾಶ್ಮೀರದಲ್ಲಿ ಮಂಗಳವಾರ ನಡೆದ ಉಗ್ರರ ದಾಳಿ ತುಂಬಾ ಆಘಾತಕಾರಿಯಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಂಗಳವಾರ ನಡೆದ ಭಯೋತ್ಪಾದಕ ದಾಳಿ ತೀರ ಆಘಾತಕಾರಿ. ಅತ್ಯಂತ ಪ್ರವಾಸಿಗರ ಆಕರ್ಷಕ ಸ್ಥಳದಲ್ಲಿ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿದ ವೇಳೆ ಕರ್ನಾಟಕದ ಶಿವಮೊಗ್ಗ ಜಿಲ್ಲೆಯ ಮಂಜುನಾಥ ರಾವ್ ಮೃತ



ಪಟ್ಟಿರೋದು ದುರದೃಷ್ಟಕರ.

ಉಗ್ರರ ದಾಳಿಯ ಕುರಿತು ಈಗಾಗಲೇ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಕೇಂದ್ರ ಗೃಹ ಸಚಿವರಿಂದ ಮಾಹಿತಿ ಪಡೆದಿದ್ದು, ಪ್ರವಾಸಿ ತಾಣದಲ್ಲಿ ಸಿಲುಕಿರುವವರ ರಕ್ಷಣೆ ಹಾಗೂ ಪರಿಸ್ಥಿತಿ ಹತೋಟಿಗೆ ತರಲು ಸೂಚನೆ ನೀಡಿದ್ದಾರೆ. ಈಗಾಗಲೇ ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ರವರು ಶ್ರೀನಗರಗೆ ತೆರಳಿದ್ದಾರೆ. ಶಾಂತಿ ಕದಡಲು ಹಾಗೂ ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಪ್ರವಾಸಿಗರ ಆಕರ್ಷಣೀಯ ತಾಣದಲ್ಲಿ ಆತಂಕ ನಿರ್ಮಾಣ ಮಾಡಲು ಉಗ್ರರು ದಾಳಿ ನಡೆಸಿದ್ದಾರೆ. ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಾಗುತ್ತದೆ. ಈ ದುರಂತದಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಸಿಗಲೆಂದು ಮತ್ತು ಅವರ ಕುಟುಂಬಗಳಿಗೆ ಶಕ್ತಿ ನೀಡಲು ನಾನು ಪ್ರಾರ್ಥಿಸುತ್ತೇನೆ ಎಂದು ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

### ಪಹಲ್ಗಾಮ್ ದಾಳಿಯ ಸಂತ್ರಸ್ತೆ ಹೇಳಿಕೆ

# ಬಿಸ್ಮಿಲ್ಲಾ ಎನ್ನುತ್ತಾ ಸ್ಥಳೀಯ ಮುಸ್ಲಿಮರು ನಮಗೆ ಸಹಾಯ ಮಾಡಿದರು

■ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಂಗಳವಾರ ನಡೆದ ಭಯೋತ್ಪಾದಕ ದಾಳಿಯ ವೇಳೆ ಮೂವರು ಸ್ಥಳೀಯ ಮುಸ್ಲಿಮರು 'ಬಿಸ್ಮಿಲ್ಲಾ ಬಿಸ್ಮಿಲ್ಲಾ' ಎಂದು ಪಠಿಸುತ್ತಾ ದಾಳಿಯ ಸ್ಥಳದಿಂದ ನಮಗೆ ಕೆಳಗೆ ಬರಲು ಸಹಾಯ ಮಾಡಿದರು ಎಂದು ಘಟನೆಯಲ್ಲಿ ಹತ್ಯೆಯಾದ ಕರ್ನಾಟಕದ ನಿವಾಸಿ ಮಂಜುನಾಥ ರಾವ್ ಅವರ ಪತ್ನಿ ಪಲ್ಲವಿ ಅವರು ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ದಾಳಿಯಲ್ಲಿ ರಾಜ್ಯದ ಇಬ್ಬರು ಸೇರಿದಂತೆ 28 ಜನರು ಮೃತಪಟ್ಟಿದ್ದಾರೆ. ಶಿವಮೊಗ್ಗದ ನಿವಾಸಿ ಆಗಿರುವ ಮಂಜುನಾಥ್ ರಾವ್ ಮತ್ತು ಬೆಂಗಳೂರಿನ ಮತ್ತಿಕೆರೆ ನಿವಾಸಿ ಭರತ್ ಭೂಷಣ್ ಅವರು ದಾಳಿಯಲ್ಲಿ ಮೃತಪಟ್ಟಿದ್ದಾರೆ.



ಘಟನೆಯಿಂದ ಇಬ್ಬರ ಕುಟುಂಬಗಳು ಸುರಕ್ಷಿತವಾಗಿವೆ ಎಂದು ವರದಿಗಳು ಉಲ್ಲೇಖಿಸಿವೆ.

ಸಾಫ್ಟ್‌ವೇರ್ ಉದ್ಯೋಗಿಯಾಗಿದ್ದ 41 ವರ್ಷದ ಭರತ್ ಭೂಷಣ್, 47 ವರ್ಷದ ರಿಯಲ್ ಎಸ್ಟೇಟ್ ಏಜೆಂಟ್ ಮಂಜುನಾಥ ರಾವ್ ಗುಂಡೇಟಿನಿಂದ ಸಾವನ್ನಪ್ಪಿದ್ದಾರೆ. ಈ ವೇಳೆ ಅವರೊಂದಿಗೆ ಇದ್ದ ಅವರ ಕುಟುಂಬ ದಾಳಿಯಿಂದ ಬಚಾವಾಗಿದ್ದಾರೆ ಎಂದು ವರದಿಯಾಗಿದೆ.

ಘಟನೆ ನಂತರ ಮಾಧ್ಯಮಗಳ ಜೊತೆಗೆ ಪಹಲ್ಗಾಮ್‌ನಿಂದ ಮಾತನಾಡಿದ್ದ ಮಂಜುನಾಥ್ ಅವರ ಪತ್ನಿ ಪಲ್ಲವಿ, ಭಯೋತ್ಪಾದಕರು ತನ್ನ ಪತಿಯ ಮೇಲೆ ಗುಂಡು ಹಾರಿಸಿದಾಗ, ತಾನು ಮತ್ತು ತನ್ನ ಮಗ ಅಲ್ಲೇ ಇದ್ದೆವು. ನಾವು ಕುದುರೆ ಸವಾರಿಯ ಮೂಲಕ ಸ್ಥಳಕ್ಕೆ ತಲುಪಿದ್ದೆವು. ನನ್ನ ಪತಿ ನನ್ನ ಮಗನಿಗೆ ತಿಂಡಿ ಖರೀದಿಸಲು ತೆರಳಿದ್ದರು ಈ ವೇಳೆ ದಾಳಿ ನಡೆಸಿದೆ ಎಂದು ಅವರು ಹೇಳಿದ್ದಾರೆ.

"ಕೆಲವೇ ನಿಮಿಷಗಳಲ್ಲಿ, ನನ್ನ ಪತಿ ರಕ್ತದ ಮಡುವಿನಲ್ಲಿ ಬಿದ್ದಿರುವುದನ್ನು ಕಂಡು ಬಂತು. ಅವರು ನನ್ನ ಕಣ್ಣ ಮುಂದೆಯೇ ನಿಧನರಾದರು, ಮತ್ತು ನಾನು ಅಸಹಾಯಕಳಾಗಿದ್ದೆ. ತನ್ನನ್ನೂ ಕೊಲ್ಲುವಂತೆ ಉಗ್ರಗಾಮಿಗಳಿಗೆ ಕೇಳಿಕೊಂಡೆ. ನನ್ನ ಮಗ ಮತ್ತು ನಾನು ಇಬ್ಬರೂ ಉಗ್ರಗಾಮಿಗಳನ್ನು ನಮ್ಮನ್ನೂ ಕೊಲ್ಲುವಂತೆ ಕೇಳಿಕೊಂಡೆವು" ಎಂದು ಅವರು ಹೇಳಿದ್ದಾರೆ.

ಅದಾಗ್ಯೂ, ಭಯೋತ್ಪಾದಕ ನಮ್ಮನ್ನು ಕೊಲ್ಲುವುದಿಲ್ಲ, ಇದನ್ನು ಪ್ರಧಾನಿ ನರೇಂದ್ರ ಮೋದಿಯವರಿಗೆ ತಿಳಿಸಬೇಕೆಂದು ಹೇಳಿದ ಎಂದು ಅವರು ಹೇಳಿದ್ದಾರೆ. ದಾಳಿಯ ಸಮಯದಲ್ಲಿ ಯಾವುದೇ ಸೇನಾ ಸಿಬ್ಬಂದಿ ಇರಲಿಲ್ಲ ಎಂದು ಅವರು ಹೇಳಿದ್ದಾರೆ.

"ದಾಳಿಯಿಂದ ನಮ್ಮನ್ನು ರಕ್ಷಿಸುವಲ್ಲಿ ನಮ್ಮ ಚಾಲಕ ಹಾಗೂ ಸ್ಥಳೀಯ ಮೂವರು ಮುಸ್ಲಿಮರು ಸಹಾಯ ಮಾಡಿದ್ದಾರೆ. ಘಟನೆ ನಡೆದಾಗಿನಿಂದ ಚಾಲಕ ನಮ್ಮೊಂದಿಗಿದ್ದಾರೆ. ಮೂವರು ಸ್ಥಳೀಯ ಮುಸ್ಲಿಮರು 'ಬಿಸ್ಮಿಲ್ಲಾ ಬಿಸ್ಮಿಲ್ಲಾ ' ಎಂದು ಹೇಳುತ್ತಾ ದಾಳಿ ನಡೆದ ಸ್ಥಳದಿಂದ ಸುರಕ್ಷಿತವಗಿ ಕೆಳಗೆ ಬರಲು ನಮಗೆ ಸಹಾಯ ಮಾಡಿದರು" ಎಂದು ಅವರು ಹೇಳಿದ್ದಾರೆ.

ಅವರು ನನ್ನ ಸಹೋದರರಂತೆ ಇದ್ದರು. ಅವರಲ್ಲಿ ಒಬ್ಬರು ನನ್ನ ಮಗನನ್ನು ಎತ್ತಿಕೊಂಡು ಬಂದರು. ಇನ್ನಿಬ್ಬರು ಕಠಿಣ ಭೂಪ್ರದೇಶವನ್ನು ದಾಟಲು ನನಗೆ ಸಹಾಯ ಮಾಡಿದರು ಎಂದು ಪಲ್ಲವಿ ಹೇಳಿದ್ದಾರೆ.

### ಜೇಮ್ಸ್ ಬಾಂಡ್ ದೋವಲ್ ಎಲ್ಲಿದ್ದಾರೆ? ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ

# ಗುಪ್ತಚರ ಎಲ್ಲಿದೆ? ಕಣ್ಗಾವಲು ಎಲ್ಲಿದೆ..?

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಾಣಕ್ಯ ಗೃಹ ಸಚಿವರು ಎಂದು ಕರೆಯಲ್ಪಡುವವರು ಸರ್ಕಾರಗಳನ್ನು ಉರುಳಿಸುವಲ್ಲಿ, ಪಕ್ಷಗಳನ್ನು ಒಡೆಯುವಲ್ಲಿ ಮತ್ತು ಚುನಾವಣೆಗಳಲ್ಲಿ ಅಕ್ರಮ ನಡೆಸುವಲ್ಲಿ ನಿರತರಾಗಿರುವಾಗ ಪಹಲ್ಗಾಮ್‌ನಂತಹ ಘಟನೆಗಳು ನಡೆಯಲು ಸಾಧ್ಯವಾಗಿದೆ ಎಂಬುದು ಸ್ಪಷ್ಟವಾಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಬುಧವಾರ ಹೇಳಿದ್ದಾರೆ. ಗುಪ್ತಚರ ಎಲ್ಲಿದೆ? ಕಣ್ಗಾವಲು ಎಲ್ಲಿದೆ? ಜೇಮ್ಸ್ ಬಾಂಡ್ ದೋವಲ್ ಎಲ್ಲಿದ್ದಾರೆ? ಎಂದು ಅವರು ಪ್ರಶ್ನಿಸಿದ್ದಾರೆ.

ಘಟನೆ ಬಗ್ಗೆ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಪ್ರಿಯಾಂಕ್ ಖರ್ಗೆ, ಗುಪ್ತಚರ ಎಲ್ಲಿದೆ? ಕಣ್ಗಾವಲು ಎಲ್ಲಿದೆ? ಜೇಮ್ಸ್ ಬಾಂಡ್ ದೋವಲ್ ಎಲ್ಲಿದ್ದಾರೆ? ಪಹಲ್ಗಾಮ್ ಮತ್ತು ಪುಲ್ವಾಮದ ಭದ್ರತಾ ಲೋಪಗಳನ್ನು ಮೊದಲೇ ಎರಡೂ ಸಂದರ್ಭಗಳಲ್ಲಿ ಗುರುತಿಸಲಾಗಿತ್ತು. ಆದರೆ ಕೇಂದ್ರ



ಸರ್ಕಾರ ಎರಡನ್ನೂ ನಿರ್ಲಕ್ಷಿಸಿದೆ ಎಂದು ಆರೋಪಿಸಿದ್ದಾರೆ.

ಇಷ್ಟೆ ಅಲ್ಲದೆ, ಆಘಾತಕಾರಿಯಾಗಿ ಬಿಜೆಪಿ ಸರ್ಕಾರವು ಹಣವನ್ನು ಉಳಿಸಲು ಕೋವಿಡ್ ನಂತರ 1.8 ಲಕ್ಷಕ್ಕೂ ಹೆಚ್ಚು ಸೇನಾ ಸಿಬ್ಬಂದಿಯನ್ನು ಕಡಿತಗೊಳಿಸಿದೆ ಎಂದು ಅವರು ಹೇಳಿದ್ದಾರೆ.

ಮಾನ್ಯ ಅಮಿತ್ ಶಾ ಅವರು ವಿರೋಧ ಪಕ್ಷದ ನಾಯಕರ ಮೇಲೆ ಕಣ್ಣಿಡಲು ಅಥವಾ ಜಯ್ ಶಾ ಅವರನ್ನು ಐಸಿಸಿ ಅಧ್ಯಕ್ಷರನ್ನಾಗಿ ಮಾಡಲು ತೋರುವ ಬದ್ಧತೆ-ಯಂತೆಯೇ ವಿದೇಶಿ ಬೆದರಿಕೆಗಳನ್ನು ಮೇಲ್ವಿಚಾರಣೆ ಮಾಡಲು ಆಸಕ್ತಿ ತೋರಿಸಿದ್ದರೆ, ಬಹುಶಃ ಚೀನಾ ಭಾರತದ ನೆಲದಲ್ಲಿ ನುಸುಳುತ್ತಿರಲಿಲ್ಲ ಮತ್ತು ಬಹುಶಃ ಈ ದುರದೃಷ್ಟಕರ ದಾಳಿಯನ್ನು ತಡೆಯಬಹುದಿತ್ತು ಎಂದು ಪ್ರಿಯಾಂಕ್ ಹೇಳಿದ್ದಾರೆ.

ಮಾಧ್ಯಮಗಳು ಪುಲ್ವಾಮಾಕ್ಕೆ ಹೋಲಿಸಿದರೆ ಈ ಬಾರಿ ಉತ್ತಮವಾಗಿ ಮತ್ತು ಹೆಚ್ಚು ಜವಾಬ್ದಾರಿಯುತವಾಗಿ ಪ್ರತಿಕ್ರಿಯಿಸುತ್ತವೆ ಎಂದು ನಾನು ಭಾವಿಸುತ್ತೇನೆ. ಈ ಸರ್ಕಾರ ಘಟನೆಯ ಗಂಭೀರತೆಯನ್ನು ಕಡಿಮೆ ಮಾಡಲು, ಸಾವುನೋವುಗಳನ್ನು ಕಡಿಮೆ ವರದಿ ಮಾಡಲು ಮತ್ತು ಈ ದುರಂತವನ್ನು ಕೋಮು ಉದ್ವಿಗ್ನತೆಯನ್ನು ಹುಟ್ಟುಹಾಕಲು ಅಥವಾ ಕಾಂಗ್ರೆಸ್ ಅನ್ನು ಎಂದಿನಂತೆ ದೂಷಿಸಲು ಖಂಡಿತವಾಗಿಯೂ ಬಳಸುತ್ತದೆ ಎಂದು ಅವರು ಹೇಳಿದ್ದಾರೆ.

# ಮೇ.5ರಂದು ಬಹಿರಂಗ ಹರಾಜು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ಘಟಕದಲ್ಲಿನ ನಿರುಪಯುಕ್ತ ಒಟ್ಟು 38 ದ್ವಿಚಕ್ರ ವಾಹನಗಳನ್ನು ಮತ್ತು 2023-24ನೇ ಸಾಲಿನ ನಿರುಪಯುಕ್ತ ಸುಟ್ಟ ಆಯಿಲ್ಲನ್ನು ಮಲ್ಲಸಮುದ್ರದಲ್ಲಿರುವ ಗದಗ ಜಿಲ್ಲಾ ಪೊಲೀಸ್ ಸಶಸ್ತ್ರ ಮೀಸಲು ಪಡೆಯ ವಾಹನ ಸಾರಿಗೆ ವಿಭಾಗದ ಆವರಣದಲ್ಲಿ ಮೇ 5 ರಂದು ಬೆಳಗ್ಗೆ 11 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಡಿಎಸ್ಪಿ ಡಿಎಆರ್ ಅಥವಾ ಆರ್‌ಪಿಐ ಡಿಎಆರ್ ಮಲ್ಲಸಮುದ್ರ ಅವರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ. ದೂರವಾಣಿ ಸಂಖ್ಯೆ ಡಿಎಸ್ಪಿ ಡಿಆರ್ ಗದಗ 948080 4406 ಮತ್ತು ಆರ್.ಪಿ.ಐ ಡಿಎಆರ್ ಗದಗ 9457563107 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೂಚಿಪೂಡಿಯಲ್ಲಿ ಉತ್ತಮ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲಾ ವಿಶ್ವವಿದ್ಯಾಲಯವು ಇತ್ತೀಚೆಗೆ ನಡೆಸಿದ ಕೂಚಿಪೂಡಿ ಜೂನಿಯರ್ ಪರೀಕ್ಷೆಯಲ್ಲಿ ಸ್ಥಳೀಯ ವಿದುಷಿ ರಾಘವಿ ಜ್ಯೋತಿಶ್ರೀ ಮತ್ತು ನೇಗಿಲಯೋಗಿ ಸಿಇಒ ಷಡಕ್ಷರಿ ಟಿ.ವಿ ಅವರ ಸುಪುತ್ರಿ ವೈಷ್ಣವಿ ಷಡಕ್ಷರಿ (ಶೇ. 82.5) ಸಾಧನೆ ಮಾಡಿದ್ದಾರೆ.



ಅವರು ನಾಟ್ಯ ಚೂಡಾಮಣಿ ವೈಜಯಂತಿ ಕಾಶಿ ಮತ್ತು ಪ್ರತೀಕ್ಷಾ ಕಾಶಿ ಅವರ ಮಾರ್ಗದರ್ಶನದಲ್ಲಿ ಅಭ್ಯಾಸ ಮಾಡಿ ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿ ಪ್ರಗತಿ ಸಾಧಿಸಿ ಗದಗ ಜಿಲ್ಲೆಯಲ್ಲಿಯೇ ಪ್ರಥಮ ಬಾರಿಗೆ ಕುಚಿಪೂಡಿ ಜೂನಿಯರ್ ಪರೀಕ್ಷೆ ತೆಗೆದುಕೊಂಡ ವಿದ್ಯಾರ್ಥಿ ಎಂಬ ಹೆಗ್ಗಳಿಕೆಗೆ ಪಾತ್ರರಗಿದ್ದಾರೆ. ಸಾಧನೆ ಮಾಡಿದ ವೈಷ್ಣವಿ ಷಡಕ್ಷರಿ ಅವರಿಗೆ ನಿಮಿಷಾಂಬಾ ನಾಟ್ಯ ಅಕಾಡಮಿಯ ಅಧ್ಯಕ್ಷೆ ರಾಘವಿ ಜ್ಯೋತಿಶ್ರೀ ಹಾಗೂ ಆಡಳಿತ ಮಂಡಳಿ ಅಭಿನಂದಿಸಿದೆ.

### ಕಾಶ್ಮೀರದ ಪಹಲ್ಗಾಮ್ ನ ಉಗ್ರರ ದಾಳಿ- ಸರ್ಕಾರದಿಂದ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸಕಲ ವ್ಯವಸ್ಥೆ- ಸಿದ್ದರಾಮಯ್ಯ

# ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾಶ್ಮೀರದ ಪಹಲ್ಗಾಮ್ ನ ಉಗ್ರರ ದಾಳಿಯ ಸಂದರ್ಭದಲ್ಲಿ ಕಾಶ್ಮೀರದಿಂದ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸರ್ಕಾರ ಸಕಲ ವ್ಯವಸ್ಥೆ ಮಾಡಲಾಗಿದೆ ಹಾಗೂ ಉಗ್ರರ ದಾಳಿಯ ಮಾಹಿತಿ ಕೊರತೆ ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ..

ಅವರು ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದರು.

ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿಯನ್ನು ತೀವ್ರವಾಗಿ



ಖಂಡಿಸಿದ ಮುಖ್ಯಮಂತ್ರಿಗಳು, ಕರ್ನಾಟಕದ ಪ್ರವಾಸಿಗರಲ್ಲಿ ಮಂಜುನಾಥ್ ಹಾಗೂ ಭರತ್ ಭೂಷಣ್ ಎಂಬುವರು ಮೃತರಾಗಿರುವ ಬಗ್ಗೆ ಮಾಹಿತಿ ನೀಡಿದರು. ಕನ್ನಡಿಗರ ರಕ್ಷಣೆ ಹಾಗೂ ಇನ್ನಿತರ ವ್ಯವಸ್ಥೆಗಳಿಗಾಗಿ ಅಧಿಕಾರಿಗಳ ತಂಡವನ್ನು ಕಾಶ್ಮೀರಕ್ಕೆ ರವಾನಿಸಲಾಗಿದೆ. ಅಲ್ಲದೇ, ಕಾಶ್ಮೀರಕ್ಕೆ ತೆರಳಿರುವ 40 ಕ್ಕೂ ಅಧಿಕ ಕನ್ನಡಿಗರನ್ನು ವಿಶೇಷ ವಿಮಾನ ವ್ಯವಸ್ಥೆ ಮಾಡಿ ಸುರಕ್ಷಿತವಾಗಿ ಕರೆತರಲು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನೂ ಕಾಶ್ಮೀರಕ್ಕೆ ಕಳಿಸಲಾಗಿದೆ ಎಂದರು.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದಿರುವ ಉಗ್ರರ ದಾಳಿ ಪೂರ್ವಯೋಜಿತ ಸಂಚು. ಪ್ರಾಣಹತ್ಯೆ ಮಾಡಿರುವ ಈ ಘಟನೆ ಅತ್ಯಂತ ಖಂಡನೀಯ. ಘಟನೆಯಲ್ಲಿ ಸುಮಾರು 28 ಜನ ಮೃತಪಟ್ಟಿರುವ ಭೀಕರವಾದ ಉಗ್ರರ ದಾಳಿ ನಡೆಯುವ ಮಾಹಿತಿ ಮೊದಲೇ ತಿಳಿಯದಿರುವುದು ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ. ಈ ಹಿಂದೆ ನಡೆದ ಪುಲ್ವಾಮಾ ಘಟನೆಯಲ್ಲಿಯೂ ಗುಪ್ತಚರ ಮಾಹಿತಿಯ ವೈಫಲ್ಯವಿತ್ತು ಎಂದರು. ದೇಶದ ಜನರಿಗೆ ಕೇಂದ್ರ ಭದ್ರತೆ ಒದಗಿಸಬೇಕು

ಪೆಹಲ್ಗಾಮ್ ಉಗ್ರರ ದಾಳಿ ಪ್ರಕರಣದಲ್ಲಿ ಕೇಂದ್ರ ಗುಪ್ತಚರ ಇಲಾಖೆ ವಿಫಲವಾಗಿದೆ. ಭಯೋತ್ಪಾದಕರನ್ನು ನಿರ್ಮೂಲನೆಗೊಳಿಸುವ ಜೊತೆ-ಗೆ ದೇಶದ ಜನರಿಗೆ ಭದ್ರತೆ ನೀಡುವ ಕಾರ್ಯವನ್ನು ಕೇಂದ್ರ ಸಮರ್ಥವಾಗಿ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿಗಳು ಅಭಿಪ್ರಾಯಪಟ್ಟರು. ಘಟನೆಯಲ್ಲಿ ಮೃತಪಟ್ಟ ರಾಜ್ಯದ ಎರಡು ಕುಟುಂಬಗಳಿಗೆ ಸಿಎಂ ಸಿದ್ದರಾಮಯ್ಯ ,ತಲಾ ಹತ್ತು ಲಕ್ಷ ರೂಪಾಯಿ ಪರಿಹಾರ ಘೋಷಣೆ ಮಾಡಿದ್ದಾರೆ.

# ಸಾರ್ವಜನಿಕರ ಕೆಲಸ ದೇವರ ಕೆಲಸ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಾರ್ವಜನಿಕರ ಕೆಲಸ ದೇವರ ಕೆಲಸವೆಂದು ಭಾವಿಸಿ ಕರ್ತವ್ಯ ನಿರ್ವಹಿಸಬೇಕು ಎಂದು ಗದಗ ಲೋಕಾಯುಕ್ತ ಅಧಿಕಾರಿ ಪಿ.ಜಿ. ಕೌಟಗಿ ಹೇಳಿದರು.

ಅವರು ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಗದಗ ಲೋಕಾಯುಕ್ತ ಕಾರ್ಯಾಲಯ ಹಾಗೂ ಪ.ಪಂ ಸಹಯೋಗದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ ಸಮಾರಂಭದಲ್ಲಿ ಅಹವಾಲು ಸ್ವೀಕರಿಸಿ ಮಾತನಾಡಿದರು.

ಸರಕಾರಿ ಅಧಿಕಾರಿಗಳು ಪ್ರಾಮಾಣಿಕತೆ, ದಕ್ಷತೆಯಿಂದ ಕಾರ್ಯ ನಿರ್ವಹಿಸುವ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ನಾವೆಲ್ಲರೂ ಜನರ ಸೇವೆಗಾಗಿಯೇ ಇರುವುದು. ಹೀಗಾಗಿ ಜನರ ಕೆಲಸಗಳನ್ನು ಶಿಸ್ತುಬದ್ಧವಾಗಿ ಮಾಡಬೇಕು. ಸರಕಾರ ಬಡ ಜನರ ಅನುಕೂಲಕ್ಕಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ. ಶಿಕ್ಷಣ, ಆರೋಗ್ಯ, ಮೂಲಭೂತ ಸೌಕರ್ಯಗಳು ರೈತರಿಗೆ, ಸಾರ್ವಜನಿಕರಿಗೆ ತಲುಪಿಸಬೇಕು ಎಂದರಲ್ಲದೆ, ಸಾರ್ವಜನಿಕರಿಂದ ಒಟ್ಟು 14 ಅರ್ಜಿಗಳನ್ನು ಪಡೆದು ಇಲಾಖಾವಾರು ಅಧಿಕಾರಿಗಳಿಂದ ಮಾಹಿತಿ ಪಡೆದು ಒಂದು ವಾರದಲ್ಲಿ ಇತ್ಯರ್ಥಪಡಿಸುವುದಾಗಿ ಭರವಸೆ ನೀಡಿದರು.

ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಕೃಷಿ ಅಧಿಕಾರಿ ಮಲ್ಲಯ್ಯ ಕೊರವಣ್ಣವರ, ಉಪ ತಹಸೀಲ್ದಾರ ವಿಜಯಲಕ್ಷ್ಮಿ ವಸ್ತ್ರದ, ಪ.ಪಂ ಸಿಬ್ಬಂದಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

### ವೈವಿಧ್ಯತೆಗೆ ಸಾಕ್ಷಿಯಾದ ನರೇಗಾ ಕಾಮಗಾರಿ ಸ್ಥಳ । ಉದ್ಯೋಗ ಖಾತ್ರಿ ಸ್ಥಳದಲ್ಲಿ ಮೋಜಿನ ಆಟಗಳು

# ಕೂಲಿ ಸ್ಥಳದಲ್ಲಿ ಆಟದ ರಂಗು

■ವಿಜಯಸಾಕ್ಷಿ ಸುದ್ದಿ, ರೋಣ

ನರೇಗಾ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದರೆ ಸಾಕು, ಸಾಮಾನ್ಯವಾಗಿ ಕೂಲಿ ಕಾರ್ಮಿಕರು ಸಲಿಕೆ, ಗುದ್ದಲಿ ಹಿಡಿದುಕೊಂಡು ಕೆಲಸ ಮಾಡುವುದನ್ನು ಕಾಣುತ್ತೇವೆ. ಆದರೆ ಅದೇ ನರೇಗಾ ಸ್ಥಳವು ಈಗ ಮನರಂಜನೆಯ ತಾಣವಾಗಿ ಮಾರ್ಪಟ್ಟಿದೆ ಅಂದರೆ ನಂಬಲೇಬೇಕು!

ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಸಾಮೂಹಿಕ ಕಾಮಗಾರಿ ಆರಂಭವಾಗಿದೆ. ಈ ಸ್ಥಳದಲ್ಲಿ ಬರಿಯ ಸಾಂಪ್ರದಾಯಿಕ ಆಟಗಳದ್ದೇ ಮೆರುಗು. ಕಬ್ಬಡ್ಡಿ, ಖೋಖೊ, ಸೋಬಾನೆ ಪದ, ಕಣ್ಣ ಮುಚ್ಚಾಲೆ ಸೇರಿದಂತೆ ಹಲವು ಆಟಗಳನ್ನು ಆಡಿ ಕೂಲಿ ಕಾರ್ಮಿಕರು ಖುಷಿ ಪಡುತ್ತಿದ್ದಾರೆ. ಇದು ಅಬ್ಬಿಗೇರಿ ಗ್ರಾಮ ಪಂಚಾಯಿತಿಗಷ್ಟೇ



ಸೀಮಿತವಾಗದೆ, ತಾಲೂಕಿನ ಸವಡಿ, ಜಕ್ಕಲಿ, ಕುರುಡಗಿ ಹೀಗೆ ಹಲವಾರು ಗ್ರಾಮಗಳಲ್ಲಿ ಹಲವಾರು ವರ್ಷಗಳಿಂದ ಆಟವಾಡುವ ಮೂಲಕ ಕೆಲಸ ಮಾಡುವದು ಸಾಮಾನ್ಯವಾಗಿದೆ.

ಕಾಮಗಾರಿ ವೇಳೆ ಕೆಲಸ ಮಾಡುತ್ತಾರೆ, ಬಿಡುವಿನ ಸಮಯದಲ್ಲಿ ಪುರುಷ ಕಾರ್ಮಿಕರು ಅತ್ಯಂತ ಉತ್ಸಾಹದಿಂದ ಬಾಲ್ಯದ ದಿನಗಳನ್ನು ನೆನಪು ಮಾಡಿಕೊಂಡು ಕಬಡ್ಡಿ, ಖೋಖೋ ಆಟದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇನ್ನು ಮಹಿಳೆಯರು ಸಹ ಖೋಖೋ ಆಟದಲ್ಲಿ ಭಾಗಿಯಾಗುತ್ತಿದ್ದಾರೆ. ಜೊತೆಗೆ ಸೋಬಾನೆ ಪದಗಳನ್ನು ಸಾಮೂಹಿಕವಾಗಿ ಹಾಡುತ್ತಾ ಜನಪದ ಸಂಸ್ಕೃತಿಯನ್ನು ಮೆರೆಯುತ್ತಿದ್ದಾರೆ. ಇಂಥ ಆಟಗಳು ಮತ್ತು ಜನಪದ ಗೀತೆಗಳ ಗಾಯನ, ಚಲನಚಿತ್ರ ಗೀತೆಗಳನ್ನು ಹಾಡುವ ಮೂಲಕ ಕಾರ್ಮಿಕರು ಕೆಲಸದ ದಣಿವಾರಿಸಿಕೊಳ್ಳಲು ಸಹಾಯವಾಗುತ್ತಿದೆ.

ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಇದರಿಂದ ವಿಶಿಷ್ಠ ವಾತಾವರಣ ನಿರ್ಮಾಣವಾಗಿದ್ದು, ಜನರು ಉದ್ಯೋಗ ಖಾತ್ರಿ ಕೆಲಸದತ್ತ ಹೆಚ್ಚು ಆಕರ್ಷಿತರಾಗುವಂತೆ ಮಾಡಿದೆ. 'ಕ್ರೀಡೆ ಇಲ್ಲದ ಜೀವನ ಕೀಟ ತಿಂದ ಹಣ್ಣಿನಂತೆ' ಎಂಬ ಉಕ್ತಿಯಂತೆ ಉದ್ಯೋಗ ಖಾತ್ರಿ ಸ್ಥಳ ಸಮಾನತೆಯ ತತ್ವವನ್ನು ಸಾರುತ್ತಿದೆ. ಅಲ್ಲದೆ ಗ್ರಾಮೀಣ ಜನರಲ್ಲಿ ಕೆಲಸದ ಬಗ್ಗೆ ಹೆಮ್ಮೆ, ವಿಶ್ವಾಸ ಇಮ್ಮಡಿಗೊಳಿಸಿದೆ.

> ನಾವು ಒಡ್ಡು ಹಾಕಿದ ಮೇಲೆ ಇನ್ನೂ ಸಮಯ ಇರುತ್ತೆ. ಮನೆಯೊಳಗ ಅತ್ತಿ-ಮಾವ, ಬಂಧು-ಬಳಗ ಇರುತ್ತ. ಅಲ್ಲಿ ಸಣ್ಣ ಹುಡುಗರ ಹಂಗ ಆಟ ಆಡಿದರೆ ಸರಿ ಅನಸಲ್ಲಾ, ಇಲ್ಲಿ ಹೊಲದಾಗ ನಮ್ಮ ಯಜಮಾನರು ಇರ್ತಾರ ಮತ್ತ ನಮ್ಮ ಗೆಳತ್ಯಾರ ಇರ್ತಾರ, ನಡೆಯುತ್ತ. ಮನಸ್ಸು ಬಿಚ್ಚಿ ಆಟ ಆಡ್ತಿವಿ, ಇದು ಬಾಳ ಖುಷಿ ಕೊಡ್ತದ.
>
> **- ರೇಣುಕಾ ರಾಮಣ್ಣವರ.**
> ನರೇಗಾ ಕೂಲಿ ಕಾರ್ಮಿಕರು, ಅಬ್ಬಿಗೇರಿ.

> ಗ್ರಾಮೀಣ ಕ್ರೀಡೆಗಳು ಇತ್ತೀಚೀನ ದಿನಗಳಲ್ಲಿ ಮೂಲೆಗುಂಪಾಗುತ್ತಿವೆ. ಗ್ರಾಮೀಣರಿಗೆ ಆಸಕ್ತಿ ಇದ್ದರೂ ಅವಕಾಶ ಇಲ್ಲದ ಕಾರಣ ಅಸಹಾಯಕರಾಗಿದ್ದಾರೆ. ದೈಹಿಕ ಶ್ರಮದ ಜೊತೆಗೆ ಗ್ರಾಮೀಣ ಸಂಪ್ರದಾಯಗಳನ್ನು ಒಟ್ಟುಗೂಡಿಸಿ ಒಂದು ಸೌಹಾರ್ದಯುತ ವಾತಾವರಣ ಸೃಷ್ಟಿ ಮಾಡುವುದು ಹಾಗೂ ಕೂಲಿಗೆ ಬಂದಾಗಲೂ ಸಹ ಖುಷಿಯಿಂದ ಇರುವ ಮಾರ್ಗವನ್ನು ಕೂಲಿ ಕಾರ್ಮಿಕರು ಕಂಡುಕೊಂಡಿದ್ದಾರೆ. ಇಂತಹ ಬೆಳವಣಿಗೆಗೆ ಕಾರಣವಾದ ಕಾರ್ಮಿಕರಿಗೆ ನನ್ನ ಕೃತಜ್ಞತೆಗಳು.
>
> **- ಚಂದ್ರಶೇಖರ ಬಿ.ಕಂದಕೂರ.**
> ಕಾರ್ಯ ನಿರ್ವಾಹಕ ಅಧಿಕಾರಿಗಳು, ರೋಣ.

# ಸಹಸ್ರ ಚಂದ್ರದರ್ಶನ ಸಮಾರಂಭ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಿರಿಯ ವ್ಯಾಪಾರಸ್ಥರಾದ ರೇವಣಸಿದ್ದಯ್ಯ ಬಾಳಿಹಳ್ಳಿಮಠ ಅವರ ಬದುಕು ಸಮಾಜಕ್ಕೆ ಮಾದರಿಯಾಗಿದ್ದು, ಗೌರವಾರ್ಥವಾಗಿ ರೇವಣಸಿದ್ದಯ್ಯನವರ ಸಹಸ್ರಚಂದ್ರ ದರ್ಶನ ಸಮಾರಂಭ ಎ.24ರಂದು ಬಾಳೆಹೊನ್ನೂರಿನ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನೆರವೇರಲಿದೆ.



ಬಾಳಿಹಳ್ಳಿಮಠ ಕಲ್ಯಾಣ ಮಂಟಪದ ಉದ್ಯಾನವನದಲ್ಲಿ ನಿರ್ಮಿಸಿದ ಶ್ರೀಮತಿ ದ್ರಾಕ್ಷಾಯಣಿ-ಶ್ರೀ ರೇವಣಸಿದ್ದಯ್ಯ ಬಾಳಿಹಳ್ಳಿಮಠ ವೇದಿಕೆಯ ಉದ್ಘಾಟನೆಯು ರಂಭಾಪುರಿ ಜಗದ್ಗುರುಗಳ ಅಮೃತ ಹಸ್ತದಿಂದ ನೆರವೇರಲಿದೆ. ಮುಕ್ತಿಮಂದಿರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ನೇತೃತ್ವ ವಹಿಸುವರು. ಲಕ್ಷ್ಮೇಶ್ವರ ಕರೇವಾಡಿಮಠದ ಮಳೇಮಲ್ಲಿಕಾರ್ಜುನ ಶಿವಾಚಾರ್ಯರು, ಗಂಜಿಗಟ್ಟಿಯ ಡಾ. ವೈಜನಾಥ ಶಿವಲಿಂಗ ಶಿವಾಚಾರ್ಯರು, ಬಂಕಾಪುರ ಆರಳೆಲೆ ಹಿರೇಮಠದ ರೇವಣಸಿದ್ದೇಶ್ವರ ಶಿವಾಚಾರ್ಯರು, ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು, ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯರು, ಅಬ್ಬಿಗೇರಿ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಸೇರಿ ಗಣ್ಯರು, ಮುಖಂಡರು, ಹಿರಿಯರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.


### ಕಣವಿ ಅಲ್ಲಮಪ್ರಭು ದೇವರ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮ ಇಂದಿನಿಂದ

# ಆಧ್ಯಾತ್ಮಿಕ ಪ್ರವಚನ, ಸಾಂಸ್ಕೃತಿಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಸುಕ್ಷೇತ್ರ ಕಣವಿ ಗ್ರಾಮದಲ್ಲಿ ಅಲ್ಲಮಪ್ರಭುದೇವರ ಶಿಲಾಮಯ ದೇವಸ್ಥಾನದ ಲೋಕಾರ್ಪಣೆ, ಅಲ್ಲಮಪ್ರಭು ದೇವರ ಪ್ರಾಣ ಪ್ರತಿಷ್ಠಾಪನೆ ಹಾಗೂ ದೇವಸ್ಥಾನದ ಕಳಸಾರೋಹಣ ಮಹೋತ್ಸವ ಎಪ್ರಿಲ್ 24ರಿಂದ 30ರವರೆಗೆ ಜರುಗುವುದು ಎಂದು ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಬಸವರಾಜ ಬಂದಕ್ಕನವರ ತಿಳಿಸಿದರು.

ಕಾರ್ಯಕ್ರಮದ ಕುರಿತು ಶ್ರೀಮಠದಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಎ.24ರಂದು ಸಂಜೆ 7 ಗಂಟೆಗೆ ಅಲ್ಲಮಪ್ರಭು ದೇವಸ್ಥಾನದ ಮಹಾದ್ವಾರ ಉದ್ಘಾಟನೆ ಹಾಗೂ ಆಧ್ಯಾತ್ಮಿಕ ಪ್ರವಚನದ ಉದ್ಘಾಟನಾ ಕಾರ್ಯಕ್ರಮದ ಸಾನ್ನಿಧ್ಯವನ್ನು ಗದಗ ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಶ್ರೀಗಳು ವಹಿಸುವರು. ಅತಿಥಿಗಳಾಗಿ ಜಿ.ಎಸ್. ಗಡ್ಡದ್ದೇವರಮಠ, ಮಲ್ಲಯ್ಯ ಹಿರೇಮಠ, ಫಕೀರಯ್ಯ ಹಿರೇಮಠ, ಹಾಲಮ್ಮ ಕುರಿ, ರೇಣವ್ವ ತಳವಾರ ಭಾಗವಹಿಸುವರು. ಕೆ.ಎ. ಬಳಿಗಾರ ಅವರಿಂದ ಉಪನ್ಯಾಸ, ನೀಲಪ್ಪ ಕಂತಿ ಹಾಗೂ ಗುರುನಾಥ ಕಮ್ಮಾರ ಅವರಿಂದ ಸಂಗೀತ, ಐಶ್ವರ್ಯ ಹಾಗೂ ಶ್ರೀಕಾಂತ ಹುಲಿ ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮ, ಲಿಂ. ಬಸವರಜ ಹಿಡ್ಕಿಮಠ ಕುಟುಂಬಸ್ಥರಿಗೆ ಸನ್ಮಾನ ಜರುಗುವುದು ಎಂದರು.



> ಎ.24ರಿಂದ 28ರವರೆಗೆ ಸಂಜೆ ವಿವಿಧ ಮಠಾದೀಶರ ನೇತೃತ್ವದಲ್ಲಿ ಪ್ರವಚನ ಕಾರ್ಯಕ್ರಮ ಜರುಗುವುದು. ಎ.28ರಂದು ಅಲ್ಲಮ ಪ್ರಭುದೇವರ ಮೂರ್ತಿ ಮೆರವಣಿಗೆ, ಕುಂಭಮೇಳ ಜರುಗುವುದು. ಎ. 29ರಂದು ವೈದಿಕ ಕಾರ್ಯಕ್ರಮ, ಎ.30ರಂದು ಬೆಳಿಗ್ಗೆ 6 ಗಂಟೆಗೆ ಅಲ್ಲಮಪ್ರಭುದೇವರ ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ, ಸಂಜೆ 6 ಗಂಟೆಗೆ ಸಮುದಾಯ ಭವನ ಉದ್ಘಾಟನಾ ಕಾರ್ಯಕ್ರಮ ನೆರವೇರಲಿದ್ದು, ಸಾನ್ನಿಧ್ಯವನ್ನು ಹೊಸಳ್ಳಿ ಬೂದೀಶ್ವರ ಮಠದ ಬೂದೀಶ್ವರ ಶ್ರೀಗಳು ವಹಿಸುವರು. ಉದ್ಘಾಟನೆಯನ್ನು ಕಾನೂನು ಸಚಿವ ಎಚ್.ಕೆ. ಪಾಟೀಲ ನೆರವೇರಿಸುವರು. ಅತಿಥಿಗಳಾಗಿ ಬಸವರಾಜ ಬೊಮ್ಮಾಯಿ, ಎಸ್.ವ್ಹಿ. ಸಂಕನೂರ ಸೇರಿದಂತೆ ಅನೇಕ ಗಣ್ಯರು ಭಾಗವಹಿಸುವರು ಎಂದು ಬಸವರಾಜ ಬಂದಕ್ಕನವರ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಟ್ರಸ್ಟ್‌ನ ಪರಶುರಾಮಪ್ಪ ಕೋಳಿವಾಡ, ಶರಣಬಸನಗೌಡ ಪಾಟೀಲ, ಪ್ರಕಾಶ ಕುರ್ತಕೋಟಿ, ಚಂದ್ರಶೇಖರಯ್ಯ ಹಿರೇಮಠ, ಪರಪ್ಪ ಗಾಜಿ, ವೀರಪ್ಪ ಮಣ್ಣಪ್ಪನವರ, ಬಸಪ್ಪ ಬಬಲಿ, ಪರಪ್ಪ ಕೋಳಿವಾಡ, ಮಹಾಂತಗೌಡ ದೊಡ್ಡಗೌಡ್ರ, ಚನ್ನಪ್ಪ ಬಳಿಗೇರ ಮತ್ತಿತರರು ಇದ್ದರು.

# ಉಗ್ರರ ದಾಳಿ: ಅಂಜುಮನ್ ಕಮಿಟಿ ಖಂಡನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಶ್ಮೀರದ ಪಹಲ್ಗಾಮ್‌ಗೆ ಆಗಮಿಸಿದ್ದ ಪ್ರವಾಸಿಗರ ಮೇಲೆ ಮಂಗಳವಾರ ಉಗ್ರರು ದಾಳಿ ನಡೆಸಿ 30ಕ್ಕೂ ಅಧಿಕ ಜನರ ಹತ್ಯೆ ನಡೆಸಿರುವ ಹೇಯ ಕೃತ್ಯವನ್ನು ಲಕ್ಷ್ಮೇಶ್ವರ ಅಂಜುಮನ್ ಏ-ಇಸ್ಲಾಂ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ ಬಲವಾಗಿ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಉಗ್ರಗಾಮಿಗಳು ದಾಳಿ ನಡೆಸಿ ಅಮಾಯಕ ಜನರನ್ನು ಬಲಿ ತೆಗೆದುಕೊಂಡಿರುವದು ನಿಜಕ್ಕೂ ನಾಚಿಕೆಗೇಡಿನ ಸಂಗತಿ.

ಇಂತಹ ಹೇಯ ಕೃತ್ಯ ಮಾಡಿದ ಯಾವುದೇ ಸಂಘಟನೆಯಾಗಿರಲಿ, ಯಾರೇ ಆಗಿರಲಿ ಅವರಿಗೆ ತಕ್ಕ ಶಾಸ್ತಿ ಮಾಡುವ ಮೂಲಕ ಉತ್ತರ ನೀಡಬೇಕಾಗಿದೆ. ಮುಸ್ಲಿಂ ಸಮಾಜ ಈ ಕೃತ್ಯವನ್ನು ಒಪ್ಪುವದಿಲ್ಲ.

ಸಮಾಜದ ವತಿಯಿಂದ ಮೃತರಿಗೆ ಶ್ರದ್ಧಾಂಜಲಿ ಸಲ್ಲಿಸುತ್ತೇವೆ ಹಾಗೂ ಅವರ ಕುಟುಂಬಕ್ಕೆ ದುಃಖವನ್ನು ತಡೆದುಕೊಳ್ಳುವ ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸುತ್ತೇವೆ ಎಂದು ಎಂ.ಎಂ. ಗದಗ ಹೇಳಿದ್ದಾರೆ.

# ಎಲ್ಲರಿಗೂ ಕಾನೂನು ಅರಿವು ಅಗತ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಡವ ಬಲ್ಲಿದ ಎನ್ನದೆ ಕಾನೂನು ಎಲ್ಲರಿಗೂ ಒಂದೇ ಆಗಿದೆ. ನಿತ್ಯ ಜೀವನಕ್ಕೆ ಬೇಕಾದ ಕಾನೂನಿನ ಸಾಮಾನ್ಯ ತಿಳುವಳಿಕೆ ಎಲ್ಲರಿಗೂ ಅಗತ್ಯವಾಗಿದೆ ಎಂದು ಮುಖ್ಯ ಪೊಲೀಸ್ ಪೇದೆ ಮಾಲತಿ ಶೀಗಿಹಳ್ಳಿ ಹೇಳಿದರು.

ಅವರು ಪಟ್ಟಣದ ಪುರಸಭೆಯ ಪದವಿ ಕಲಾ ಮಹಾವಿದ್ಯಾಲಯದಲ್ಲಿ ಹೊಸ ಬಿಎನ್‌ಎಸ್ ಕಾಯ್ದೆಗಳ ಬಗ್ಗೆ ಕಾನೂನು ಅರಿವು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಹೆಣ್ಣುಮಕ್ಕಳಿಗಾಗಿ ಅನೇಕ ಕಾನೂನುಗಳಿದ್ದು, ಆ ಬಗ್ಗೆ ತಿಳಿದುಕೊಳ್ಳಬೇಕು. ಮನೆಯ ಹತ್ತಿರ ಯಾವುದೇ ಕಾನೂನು ಬಾಹಿರ ಚಟುವಟಿಕೆ ನಡೆದರೆ 112 ಸಂಖ್ಯೆಗೆ ಕರೆ ಮಾಡಬೇಕು. ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳು ಬಿಎನ್‌ಎಸ್ 64 ಅಡಿಯಲ್ಲಿ ದೂರು ದಾಖಲು ಆಗುತ್ತಿದ್ದು, ಮನೆಯಲ್ಲಿ ಬಾಲ್ಯ ವಿವಾಹಕ್ಕೆ ಯತ್ನಿಸಿದಾಗ ಅದನ್ನು ತಡೆಯಬೇಕು. ಸೈಬರ್ ಅಪರಾದಗಳ ಬಗ್ಗೆಯೂ ವಿದ್ಯಾರ್ಥಿಗಳು ಜಾಗೃತಿ ವಹಿಸಬೇಕು ಎಂದು ಕರೆ ನೀಡಿದರು.

ಇನ್ನೊರ್ವ ಮುಖ್ಯ ಪೇದೆ ರಾಜು ಯರಗಟ್ಟಿ ಮಾತನಾಡಿ, ಜನ ಸಾಮಾನ್ಯರಿಗೆ ಅನೇಕ ಕಾನೂನಿನ ಬಗ್ಗೆ ಸರಿಯಾದ ಮಾಹಿತಿ ಇಲ್ಲದೆ ಅನೇಕ ಘಟನೆಗಳಿಗೆ ಕಾರಣವಾಗುತ್ತಿದ್ದಾರೆ. ಕಾನೂನುಗಳ ಬಗ್ಗೆ ಸಾಮಾನ್ಯ ತಿಳುವಳಿಕೆ ಮೂಡಿದಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗಬಹುದಾಗಿದೆ. ಅದರಲ್ಲೂ ಮಹಿಳೆಯರಿಗಾಗಿ ವಿಶೇಷ ಕಾನೂನುಗಳಿದ್ದು, ವಿದ್ಯಾರ್ಥಿನಿಯರು ಅದನ್ನು ತಿಳಿದುಕೊಂಡು ಜಾಗೃತಿ ಮೂಡಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಪ್ರೊ. ವ್ಹಿ.ಎನ್. ನಾಗಶೆಟ್ಟಿ, ಮುಖ್ಯ ಪೊಲೀಸ್ ಪೇದೆ ಚನ್ನಬಸಯ್ಯ ಮಠಪತಿ ಸೇರಿದಂತೆ ಅನೇಕರಿದ್ದರು.

# ಬೆಳ್ಳಟ್ಟಿಯಲ್ಲಿ ಶ್ರೀ ವೀರಭದ್ರೇಶ್ವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ವೀರಭದ್ರೇಶ್ವರ ಮಹಾರಥೋತ್ಸವವು ಮಂಗಳವಾರ ಸಂಜೆ ಸಾವಿರಾರು ಭಕ್ತರ ಉಪಸ್ಥಿತಿಯಲ್ಲಿ ಸಂಭ್ರಮದಿಂದ ಜರುಗಿತು.

ಎ.20ರಂದು ಜಾತ್ರಾ ಮಹೋತ್ಸವದ ನಿಮಿತ್ತ ನೂತನ ಗಡ್ಡಿ ರಥ-ಕ್ಕೆ ಬನ್ನಿಕೊಪ್ಪ ಬ್ರಹ್ನಮಠ, ಮೈಸೂರು ಜಪದಕಟ್ಟೆಯ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹಾಗೂ ಬೆಳ್ಳಟ್ಟಿಯ ಬಸವರಾಜ ಸ್ವಾಮೀಜಿ ಚಾಲನೆಯನ್ನು ನೀಡಿದರು.

ನಂತರ ನಡೆದ ಸಮಾರಂಭದಲ್ಲಿ ಮಾತನಾಡಿದ ಬೆಳ್ಳಟ್ಟಿಯ ರಾಮಲಿಂಗೇಶ್ವರ ದಾಸೋಹ ಮಠದ ಬಸವರಾಜ ಸ್ವಾಮೀಜಿ, ವೀರಭದ್ರ ದೇವರು ದುಷ್ಟರನ್ನು ಶಿಕ್ಷಿಸುತ್ತಾ, ಶಿಷ್ಟರನ್ನು ರಕ್ಷಿಸುತ್ತಾ,



ಶಿವಭಕ್ತಿಯ ಆಂದೋಲನವನ್ನು ಸೃಷ್ಟಿಸಿದವನಾಗಿದ್ದಾನೆ. ಭೂಲೋಕದಲ್ಲಿ ಅನೇಕ ಸ್ಥಳಗಳಲ್ಲಿ ನೆಲೆಸಿ ಭಕ್ತರ ಕಾಮಧೇನುವಾಗಿದ್ದಾರೆ. ಬೆಳ್ಳಟ್ಟಿಯಲ್ಲೂ ಸಹ ವೀರಭದ್ರ ದೇವರ ಭಕ್ತರು ಇಚ್ಛಾಶಕ್ತಿಯಿಂದ ನೂತನ ಬೃಹತ್ ಗಡ್ಡಿ ರಥವನ್ನು ನಿರ್ಮಿಸಿ ತಮ್ಮ ಭಕ್ತಿಯನ್ನು ಸಮರ್ಪಿಸಿದ್ದಾರೆ ಎಂದರು. ಬೆಳ್ಳಟ್ಟಿ ಮತ್ತು ಸುತ್ತಮುತ್ತಲಿನ ಸಾವಿರಾರು ಭಕ್ತರು ಜಾತ್ರೆಯ ಮಹೋತ್ಸವದ ವಿವಿಧ ಕಾರ್ಯಗಳಲ್ಲಿ ಭಾಗಿಯಾಗಿದ್ದರು.

# ನಿಧನ



**ಅಡಿವೆಪ್ಪ ಬಣಕಾರ**

ಗದಗ: ರಾಜೀವಗಾಂಧಿ ನಗರದ ಈಶ್ವರ ಬಡಾವಣೆಯ ನಿವಾಸಿ, ಹಿರಿಯ ಪ್ರಾಥಮಿಕ ಕನ್ನಡ ಸರಕಾರಿ ಪಾಠಶಾಲೆಯ ನಿವೃತ್ತ ಮುಖ್ಯಾಧ್ಯಾಪಕ ಹಾಗೂ ಚಿತ್ರ ಕಲಾವಿದ ಅಡಿವೆಪ್ಪ ಶಿವರುದ್ರಪ್ಪ ಬಣಕಾರ (65) ಬುಧವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಗದಗ-ಹೊಂಬಳ ರಸ್ತೆಯಲ್ಲಿರುವ ವೀರಶೈವ-ಲಿಂಗಾಯತ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ಬುಧವಾರವೇ ಜರುಗಿತು.

**ಸಂತಾಪ:** ಪ್ರತಿಷ್ಠಿತ ಧಾರವಾಡದ ಗಂಡು ಮಕ್ಕಳ ಟ್ರೇನಿಂಗ್ ಕಾಲೇಜಿನ ಟಿ.ಸಿ.ಎಚ್. ವಿದ್ಯಾರ್ಥಿಯಾಗಿದ್ದ ಅಡಿವೆಪ್ಪ ಬಣಕಾರ ಅಗಲಿಕೆಗೆ ಟ್ರೇನಿಂಗ್ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಬಳಗವು ತೀವ್ರ ಶೋಕ ವ್ಯಕ್ತಪಡಿಸಿದೆ.

# ಸೌಲಭ್ಯಕ್ಕೆ ಆಗ್ರಹಿಸಿ ಪೌರಕಾರ್ಮಿಕರ ಮನವಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯದ ಎಲ್ಲ ಪೌರಕಾರ್ಮಿಕರಿಗೆ ಸಿಗುವ ಸೌಲಭ್ಯಗಳನ್ನು ನಮಗೂ ಸಿಗುವಂತೆ ಮಾಡಬೇಕೆಂದು ಆಗ್ರಹಿಸಿ ತಾಲೂಕಾ ಪೌರಕಾರ್ಮಿಕರ ಸಂಘದ ವತಿಯಿಂದ ಬುಧವಾರ ತಹಸೀಲ್ದಾರ ಅನಿಲ ಬಡಿಗೇರರ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪದಾಧಿಕಾರಿ ಉಡಚಪ್ಪ ನೀಲಣ್ಣವರ, ತಾಲೂಕಾಧ್ಯಕ್ಷ ಹುಚ್ಚಪ್ಪ ಗೋಡೆಣ್ಣವರ, ರಾಜ್ಯದಲ್ಲಿರುವ ಎಲ್ಲಾ ಮಹಾನಗರಪಾಲಿಕೆ/ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ರಾಜ್ಯ ಸರಕಾರಿ ನೌಕರರೆಂದು ಘೋಷಿಸುವುದು, ಸರಕಾರಿ ನೌಕರರಿಗೆ ದೊರಕುತ್ತಿರುವ ಕೆಜಿಐಡಿ/ಜಿಪಿಎಫ್, ಪೋತಿ, ಸಂಜೀವಿನಿ ಹಾಗೂ ರಾಜ್ಯಾದ್ಯಂತ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದುಡಿಯುತ್ತಿರುವ ವಾಟರ್‌ಮನ್/ಕಂಪ್ಯೂಟರ್ ಆಪರೇಟರ್/ವಾಹನ ಚಾಲಕರು/ಬೀದಿ ದೀಪ ನಿರ್ವಹಣೆ ಕಾರ್ಮಿಕರು/ಲೋಡರ್/ ಕ್ಲೀನರ್/ಹೆಲ್ಪರ್/ಸ್ಯಾನಿಟರಿ ಸೂಪರ್‌ವೈಜರ್ ಇನ್ನೂ ಅನೇಕ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರನ್ನು ಗುತ್ತಿಗೆ ಪದ್ಧತಿಯಿಂದ ವಿಮುಕ್ತಿಗೊಳಿಸಬೇಕು. ಒಂದು ವೇಳೆ ಪೌರಕಾರ್ಮಿಕರ ನ್ಯಾಯಸಮ್ಮತ ಬೇಡಿಕೆಗಳಿಗೆ ಸರಕಾರ ಸ್ಪಂದಿಸದೇ ಹೋದರೆ ರಾಜ್ಯ ಸಂಘ ನೀಡಿರುವ ಕರೆಯಂತೆ ಮೇ.26ರಿಂದ ಅನಿರ್ದಿಷ್ಟ ಮುಷ್ಕರ ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದರು. ಈ ಸಂದರ್ಭದಲ್ಲಿ ಚನ್ನವೀರಯ್ಯ ಹಿರೇಮಠ, ಆನಂದ ಗಂಟಿ, ರಮೇಶ ಕಂಟೆಮ್ಮನವರ, ಉಡಚವ್ವ ಬಡೆಣ್ಣವರ, ಫಕ್ಕಿರೇಶ ಬಂತಿ, ಹನುಮಂತ ಕೊಡ್ಲಿ, ನಾಗೇಶ ಕುಲಕರ್ಣಿ, ದುರ್ಗಪ್ಪ ಗುಡಿಮನಿ, ಮರಿಯಪ್ಪ ಪೂಜಾರ, ಉಮೇಶ ಬಡೆಣ್ಣವರ, ಮರಿಯಪ್ಪ ಗುಡಿಮನಿ, ಲಕ್ಷ್ಮಣ ಮಳ್ಳಣ್ಣವರ, ನೀಲವ್ವ ಗುಡಿಮನಿ, ರತ್ನವ್ವ ಬಡೆಣ್ಣವರ, ಬಸವಣ್ಣೆವ್ವ ಗುಡಿಮನಿ, ಯಲ್ಲವ್ವ ಗೋಡೆಣ್ಣವರ, ದ್ರಾಕ್ಷಾಯಿಣಿ ಕಂಟೆಮ್ಮನವರ, ನಿಂಗವ್ವ ಮರಚಣ್ಣವರ, ಹನಮವ್ವ ಗುಡಿಮನಿ, ಸಾವಕ್ಕ ಗುಡಿಮನಿ ಉಪಸ್ಥಿತರಿದ್ದರು.

## ಭಯೋತ್ಪಾದಕರಿಗೆ ತಕ್ಕ ಪ್ರತ್ಯುತ್ತರ ನೀಡಬೇಕು



**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾಂಧಿ ವೃತ್ತದಲ್ಲಿ ಜಮ್ಮು ಕಾಶ್ಮೀರದ ಪಹಲ್ಗಾಮ್ ಜಿಲ್ಲೆಯಲ್ಲಿ ನಡೆದ ಧರ್ಮಾಧಾರಿತ ಹಾಗೂ ಅಮಾನವೀಯವಾಗಿ ನಡೆದ ದಾಳಿಯಲ್ಲಿ ಹುತಾತ್ಮರಾದ ಭಾರತೀಯರಿಗೆ ಹಾಗೂ ವಿದೇಶಿ ಪ್ರಜೆಗಳಿಗೆ ಶ್ರೀರಾಮ ಸೇನಾ, ಆಟೋ ಸೇನಾ ಹಾಗೂ ದಲಿತ ಮಿತ್ರ ಮೇಳಗಳ ವತಿಯಿಂದ ದೀಪ ಬೆಳಗಿಸಿ, ಮೌನಾಚರಣೆ ಮಾಡುವ ಮೂಲಕ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಮಾಡನಾಡಿ, ಭಯೋತ್ಪಾದಕರ ಈ ಕೃತ್ಯಕ್ಕೆ ತಕ್ಕ ಪ್ರತ್ಯುತ್ತರ ನೀಡಬೇಕು. ಅದು ಯುದ್ಧ ಸಾರುವ ಮೂಲಕವಾದರೂ ಸರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ರಾಜು ಗುಡಿಮನಿ, ದಲಿತ ಮುಖಂಡರಾದ ಮಂಜುನಾಥ ಕೊಟ್ನಿಕಲ್, ರಾಘವೇಂದ್ರ ಪರಾಪೂರ, ಸುರೇಶ ಹಾದಿಮನಿ, ಸಂಘಟನೆಗಳ ಪ್ರಮುಖರಾದ ಮಹೇಶ ರೋಖಡೆ, ಹುಲಗಪ್ಪ ವಾಲ್ಮೀಕಿ, ಕಿರಣ ಹಿರೇಮಠ, ಸತೀಶ ಕುಂಬಾರ, ವೆಂಕಟೇಶ ದೊಡ್ಡಮನಿ, ರಾಚೋಟಿ ಕಾಡಪ್ಪನವರ, ಶರಣೇಶ ರಾಜು ಗದ್ದಿ, ಬಸವರಾಜ ಕುರ್ತಕೋಟಿ, ವಿಶ್ವನಾಥ ಶೀರಿ, ಸಂಜೀವ ಚೆಟ್ಟಿ, ಸುನೀಲ ಮುಳ್ಳಾಳ, ಈರಣ್ಣ ಗಾಣಿಗೇರ, ಶಿವಯೋಗಿ ಹಿರೇಮಠ, ಸ್ವರೂಪ ಉಳ್ಳಿಕಾಶಿ, ಮಾನೇಶ ದಾಸರ, ಮಂಜುನಾಥ ಗುಡಿಮನಿ, ಶರಣಪ್ಪ ಲಕ್ಕುಂಡಿ, ಕುಮಾರ ಮಿಟ್ಟಿಮಠ, ಶಶಿಧರ ಘಟ್ಟಿ, ಅಶೋಕ ಭಜಂತ್ರಿ, ಶ್ರೀನಿವಾಸ ನಿಂಬಲಗುಂಡಿ, ರೇಖಾ ಹುಲ್ಲೂರ ಇಟಗಿ ಮುಂತಾದವರು ಉಪಸ್ಥಿತರಿದ್ದರು.

---

### ದೈಹಿಕ ನ್ಯೂನ್ಯತೆಯನ್ನೂ ಲೆಕ್ಕಿಸದೆ ನರೇಗಾ ಕಾಮಗಾರಿಯಲ್ಲಿ ಪಾಲ್ಗೊಳ್ಳುತ್ತಿರುವ ವಿಶೇಷ ಚೇತನರು

# ವಿಶೇಷ ಚೇತನರ ಸ್ವಾವಲಂಬನೆಗೆ ಆಸರೆ

**■ ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ತಾಲೂಕಿನ ವಿವಿಧ ಗ್ರಾಮಗಳಲ್ಲಿ ಪ್ರಗತಿಯಲ್ಲಿರುವ ನರೇಗಾ ಸಮುದಾಯ ಬದು ನಿರ್ಮಾಣ ಕಾಮಗಾರಿಗಳಲ್ಲಿ ವಿಶೇಷಚೇತನರು ಹಾಗೂ ವಯೋವೃದ್ಧ ಹಿರಿಯರು ಸಕ್ರಿಯವಾಗಿ ಭಾಗವಹಿಸುವ ಮೂಲಕ ಸ್ವಾವಲಂಬನೆ ಸಾಧಿಸಿದ್ದಾರೆ.

ಬೇಸಿಗೆ ಬಂದರೆ ಗುಳೆ ಹೋಗುವ ಜನರಿಗೆ ಕೆಲಸ ಕಲ್ಪಿಸಿ ಇದ್ದೂರಲ್ಲೇ ದುಡಿಮೆಗೆ ದಾರಿ ಮಾಡುವ ನರೇಗಾ ಸಮುದಾಯ ಕಾಮಗಾರಿಗಳು ತಾಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಆರಂಭವಾಗಿವೆ. ಜೊತೆಗೆ ವಿಶೇಷಚೇತನರಿಗೂ ಮುತುವರ್ಜಿಯಿಂದ ಕೆಲಸ ನೀಡಿ ಸ್ವಾವಲಂಬನೆಗೆ ದಾರಿ ಮಾಡಿಕೊಟ್ಟಿದೆ. ಬಾಗೇವಾಡಿ ಗ್ರಾಮದ 41 ವರ್ಷದ ಹೊನಕೇರಪ್ಪ ಭಕ್ಷಪ್ಪನವರ ಅವರ ಒಂದು ಕಾಲು ಮೊದಲಿನಿಂದಲೂ ಊನವಾಗಿದ್ದು, ನರೇಗಾ ಯೋಜನೆಯ ಕಾಮಗಾರಿಯಲ್ಲಿ ಕೂಲಿಕಾರರಿಗೆ



ನೀರು ಕೊಡುವುದರ ಜೊತೆಗೆ ಪಡ ಕಡಿಯುವುದರಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಆ ಮೂಲಕ ಹಳ್ಳಿಗಳ ಅಭ್ಯುದಯದ ಕನಸು ಹೊಂದಿರುವ ನರೇಗಾ ಯೋಜನೆಯಲ್ಲಿ ಭಾಗವಹಿಸಿ ಗರ್ಭಿಣಿಯರು, ಅಂಗವಿಕಲರು ಹಾಗೂ ವೃದ್ಧರಿಗಾಗಿ ಇರುವ ಅರ್ಧ ಕೆಲಸ ಪೂರ್ಣ ಕೂಲಿ ನಿಯಮವನ್ನು ಸದುಪಯೋಗ ಪಡಿಸಿಕೊಂಡಿದ್ದಾರೆ. ಕಾಲು ಊನ ಇರುವುದರಿಂದ ಇತರೆ ಜನರ ಜಮೀನು ಹಾಗೂ ದಿನಗೂಲಿ ಕೆಲಸ ಸಿಗುವುದು ಕಡಿಮೆ. ಆದರೆ ನರೇಗಾ ಯೋಜನೆಯ ಮೂಲಕ ಆ ಕೊರತೆ ನೀಗಿ ಉತ್ತಮ ಕೂಲಿ ಮೊತ್ತ ಪಾವತಿಯಾಗುತ್ತಿದೆ ಎನ್ನುತ್ತಾರೆ ಅವರು.

ಹೊನಕೇರಪ್ಪ ಅವರು ನರೇಗಾ ಯೋಜನೆಯನ್ನು ಹೀಗೆ ಸದುಪಯೋಗ ಪಡಿಸಿಕೊಂಡರೆ, ಬಿದರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುಂಡವಾಡ ಗ್ರಾಮದ 45 ವರ್ಷದ ಅಶೋಕ ವಿರೂಪಾಕ್ಷಪ್ಪ ಕೊಂಚಿಗೇರಿ ಅವರ ಬಲಗಾಲು ಸಹ ಹುಟ್ಟಿನಿಂದ ಪೋಲಿಯೋ ಕಾರಣಕ್ಕೆ ಊನವಾಗಿದೆ. ಖಾಸಗಿ ವ್ಯಕ್ತಿಗಳ ಬಳಿ ಅವರಿಗೂ ಕೂಲಿ ಕೆಲಸ ಸಿಗುವುದು ದುಸ್ತರ. ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿ ನರೇಗಾ ಯೋಜನೆಯಡಿ ಸಕ್ರಿಯರಾಗಿ ಸಮುದಾಯ ಕಾಮಗಾರಿಯಲ್ಲಿ ಭಾಗವಹಿಸಿರುವ ಅವರು ಅರ್ಧ ಕೆಲಸ ಪೂರ್ಣ ಕೂಲಿ ನಿಯಮದಿಂದ ದಿನವೊಂದಕ್ಕೆ 370 ರೂಪಾಯಿ ಕೂಲಿ ಪಡೆಯುತ್ತಿದ್ದಾರೆ. ಇದರಿಂದ ನಮ್ಮ ಕುಟುಂಬಕ್ಕೆ ಆರ್ಥಿಕವಾಗಿ ಸಹಾಯವಾಗಿದ್ದು, ಮನೆಯ ಸ್ಥಿತಿ ಸುಧಾರಣೆಗೆ ಕಾರಣವಾಗಿದೆ ಎನ್ನುವುದು ಯೋಜನೆಯ ಕುರಿತು ಅವರ ಖುಷಿಯ ಮಾತು.

> ನ್ಯೂನ್ಯತೆಯನ್ನು ಲೆಕ್ಕಿಸದೆ ಈ ಮೂವರು ನರೇಗಾ ಯೋಜನೆಯನ್ನು ಸದುಪಯೋಗ ಪಡಿಸಿಕೊಂಡಿರುವುದು ಮಾದರಿಯಾಗಿದೆ. ಗ್ರಾ.ಪಂ ಮಟ್ಟದಲ್ಲಿ ವಿಶೇಷಚೇತನರು ಹಾಗೂ ಮಹಿಳೆಯರು ಹೆಚ್ಚೆಚ್ಚು ಭಾಗವಹಿಸುವಂತೆ ಮಾಡಲು ಅಗತ್ಯ ಐಇಸಿ ಚಟುವಟಿಕೆಗಳನ್ನು ತಾಲೂಕಿನ ಗ್ರಾ.ಪಂಗಳಲ್ಲಿ ಹಮ್ಮಿಕೊಂಡಿದ್ದೆವು. ಮುಂಬರುವ ದಿನಗಳಲ್ಲಿ ತಾಲೂಕಿನಲ್ಲಿ ನರೇಗಾ ಯೋಜನೆಯ ಆಶಯವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ತಿಳಿಸಿ ಸಮರ್ಪಕ ಅನುಷ್ಠಾನಕ್ಕಾಗಿ ಶ್ರಮಿಸಲಿದ್ದೇವೆ.
>
> **– ವಿಶ್ವನಾಥ ಹೊಸಮನಿ.**
> ಮುಂಡರಗಿ ತಾ.ಪಂ ಇಓ.

ಮುಂಡವಾಡ ಗ್ರಾಮದ ಸಮುದಾಯ ಬದು ಕಾಮಗಾರಿಯಲ್ಲಿ ಭಾಗವಹಿಸಿರುವ 40 ವರ್ಷದ ಹಾಲವ್ವ ದುರಗಪ್ಪ ಹರಿಜನ ಹುಟ್ಟಿನಿಂದಲೇ ವಿಶೇಷಚೇತನ ಮಹಿಳೆ. ಎಡಗೈ ಮಣಿಕಟ್ಟು ಮುಷ್ಟಿ ಸಮಸ್ಯೆಯಿಂದ ಕುಗ್ಗದ ಇವರು ನರೇಗಾ ಯೋಜನೆಯಡಿ ಕೂಲಿ ಕೆಲಸಕ್ಕೆ ಗ್ರಾ.ಪಂ ಮೂಲಕ ಹೆಸರು ನೋಂದಾಯಿಸಿಕೊಂಡು ಒಂದೇ ಕೈಯಲ್ಲಿ ಬುಟ್ಟಿಗೆ ಮಣ್ಣಿನ ಹೆಂಡೆಗಳನ್ನು ತುಂಬುವ ಮೂಲಕ ನರೇಗಾ ಯೋಜನೆಯ ಲಾಭ ಪಡೆದುಕೊಂಡಿದ್ದಾರೆ. 'ನರೇಗಾದಾಗ ಭಾಗವಹಿಸಿದ್ರ ಬರೋ ಕೂಲಿ ಅನುಕೂಲ ಆಗತ್ರಿ. ಅದರಾಗು ಈಗ ಕೂಲಿ 370 ರೂಪಾಯಿ ಆಗಿರಾದ್ರಿಂದ ಭಾಳ ಖುಷಿಯಾಗೇತ್ರಿ. ಅದಕ ಬದು ಕೆಲಸದಾಗ ತಪ್ಪದ ಭಾಗವಹಿಸಿನ್ರಿ' ಎನ್ನುವುದು ಹಾಲವ್ವ ಅವರ ಮಾತು.

---

### ರೈತ ಮಹಿಳೆಗೆ ಸಾಲ ಕಟ್ಟುವಂತೆ ಒತ್ತಾಯಿಸುತ್ತಿರುವ ಮೈಕ್ರೋ ಫೈನಾನ್ಸ್ ಸಿಬ್ಬಂದಿ

# ನಿಲ್ಲದ 'ಮೈಕ್ರೋ' ಕಿರುಕುಳ

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದ ಮೈಲಾರಲಿಂಗೇಶ್ವರ ಬಡಾವಣೆಯ ನಿವಾಸಿಗಳು ಸಾಲದ 20 ಕಂತು ಕಟ್ಟಿದರೂ ಒಂದೇ ವಾರದಲ್ಲಿ ಕಂತು ಮರುಪಾವತಿ ಮಾಡಿಲ್ಲ ಎನ್ನುವ ಕಾರಣಕ್ಕೆ ರೈತ ಮಹಿಳೆ ಲತಾ ಈಶಪ್ಪ ಮಠದ ಎನ್ನುವವರ ಮನೆಗೆ ಐಡಿಎಫ್‌ಸಿ ಫಸ್ಟ್ ಭಾರತ್ ಫೈನಾನ್ಸ್‌ನ ಮೂವರು ಸಿಬ್ಬಂದಿಗಳು ಬಂದು ಮನಸೋ ಇಚ್ಛೆ ಮಾತನಾಡಿದ ಘಟನೆ ವರದಿಯಾಗಿದೆ.



ಗ್ರಾಮದ ಲತಾ ಈಶಪ್ಪ ಮಠದ ಸೇರಿದಂತೆ ಗ್ರಾಮದ ಹಲವರು ಸದರಿ ಐಡಿಎಫ್‌ಸಿ ಫಸ್ಟ್ ಭಾರತ್ ಫೈನಾನ್ಸ್‌ನಲ್ಲಿ 35 ಸಾವಿರ ರೂ ಸಾಲ ಪಡೆದುಕೊಂಡು ಈಗಾಗಲೇ 20 ಕಂತಗಳಲ್ಲಿ 37800 ರೂ ಮರುಪಾವತಿ ಮಾಡಿದ್ದಾರೆ. ಕಟ್ಟಿದ್ದು. ಶೇ.14.74ರಂತೆ ಬಡ್ಡಿ ಹಣದೊಂದಿಗೆ ಇನ್ನು 4 ಕಂತು ಕಟ್ಟುವುದು ಬಾಕಿಯಿತ್ತು. ಆದರೆ, ಈ ವಾರದ ಕಂತನ್ನು ಕಟ್ಟಿಲ್ಲ ಎನ್ನುವ ಕಾರಣಕ್ಕೆ ಮನೆಯವರೆಗೆ ಬಂದು ನಮಗೆ ಭಯ ಹುಟ್ಟಿಸುವ ರೀತಿ ಮಾತನಾಡಿ ನೀವು ಕಂತು ಕಟ್ಟಲೇಬೇಕು. ಅಲ್ಲಿಯವರೆಗೆ ಮನೆ ಬಿಟ್ಟು ಕದಲುವುದಿಲ್ಲ, ಮನೆಗೆ ಬೀಗ ಹಾಕುತ್ತೇವೆ ಎಂದು ಹೇಳುತ್ತಿದ್ದಾರೆ. ನಮಗೆ ಸಮಯ ಕೊಡಿ, ಬೆಳೆ ಬಂದ ಕೂಡಲೇ ಸಾಲ ಕಟ್ಟುತ್ತೇವೆ ಎಂದರೂ ಕೇಳುತ್ತಿಲ್ಲ ಎಂದು ರೈತ ಮಹಿಳೆ ಲತಾ ಈಶಪ್ಪ ಮಠದ ತಮ್ಮ ಅಳಲು ತೋಡಿಕೊಂಡಿದ್ದಾರೆ.

ಈಗಾಗಲೇ ಡಂಬಳ ಹೋಬಳಿಯಾದ್ಯಂತ ಮೈಕ್ರೋ ಫೈನಾನ್ಸ್‌ಗಳು 10 ಸಾವಿರದಿಂದ 50 ಸಾವಿರದವರೆಗೆ ಸಾಲವನ್ನು ನೀಡಿ ರಿಸರ್ವ್ ಬ್ಯಾಂಕಿನ ನಿಯಮಗಳನ್ನು ಗಾಳಿಗೆ ತೂರಿ ರೈತರ, ಕಾರ್ಮಿಕರ ಮತ್ತು ಜನಸಾಮನ್ಯರ ಮೇಲೆ ಅತಿ ಹೆಚ್ಚು ಬಡ್ಡಿಯನ್ನು ಹೇರಿ, ಸಾಲ ಪಡೆದವರ ಮೇಲೆ ಒಂದು ಸಣ್ಣ ನೋಟಿಸ್ ಕೂಡ ನೀಡದೆ ಮನಸೋ ಇಚ್ಛೆ ವರ್ತಿಸುತ್ತಿದ್ದಾರೆ. ಗದಗ ಜಿಲ್ಲಾ ಉಸ್ತುವಾರಿ ಸಚಿವರು ಈ ಮೈಕ್ರೋ ಫೈನಾನ್ಸ್‌ನವರ ಸಭೆಯನ್ನು ಕರೆದು ತಿಳಿವಳಿಕೆ ನೀಡಿ, ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

> ಮೈಕ್ರೋ ಫೈನಾನ್ಸ್‌ಗಳು, ಅಲ್ಲಿನ ಸಿಬ್ಬಂದಿಗಳು ಸಾಲ ಮರುಪಾವತಿಯ ಬಗ್ಗೆ ಕಾನೂನು ಉಲ್ಲಂಘಿಸಿ ತೊಂದರೆ ನೀಡಿದರೆ ತಕ್ಷಣ ಜಿಲ್ಲಾ ಕಚೇರಿಗೆ ಬಂದು ಅರ್ಜಿಯನ್ನು ಸಲ್ಲಿಸಿದರೆ ಸೂಕ್ತ ಕ್ರಮಕ್ಕೆ ಮುಂದಾಗುತ್ತೇವೆ.
>
> **– ಸಿ.ಎನ್. ಶ್ರೀಧರ್.**
> ಗದಗ ಜಿಲ್ಲಾಧಿಕಾರಿ.

---

# ಉಗ್ರರನ್ನು ಬುಡಸಮೇತ ಕಿತ್ತುಹಾಕಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಮ್ಮು– ಕಾಶ್ಮೀರದಲ್ಲಿ ಮಂಗಳವಾರ ಪ್ರವಾಸಿಗರಿಗೆ ಹೆಸರು, ಧರ್ಮ ಕೇಳಿ ಗುಂಡಿನ ದಾಳಿ ನಡೆಸಿದ ಉಗ್ರರ ನಡೆ ಖಂಡನಿಯ.

ಈ ದಾಳಿ ಇತ್ತೀಚೆಗೆ ಕೇಂದ್ರ ಸರ್ಕಾರ ಮಂಡಿಸಿದ ವಕ್ಫ್ ಬಿಲ್‌ನ ಪ್ರತೀಕಾರವೇ ಆಗಿದೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಉಗ್ರರ ದಾಳಿ ಅಮಾಯಕ ಸಾರ್ವಜನಿಕರ ಜೀವ ತೆಗೆದಿದೆ.



ದಾಳಿಯ ಹಿಂದಿನ ಸಂಚು ರೂಪಿಸಿದ ದಾಳಿಕೋರರ ನಿರ್ನಾಮದ ಜೊತೆಗೆ ಉಗ್ರರ ಜೊತೆಗೆ ನಂಟು ಹೊಂದಿದ ಎಲ್ಲ ಸಂಘಟನೆಗಳನ್ನು ನಿರ್ನಾಮ ಮಾಡುವ ಮೂಲಕ ಪಾಪಿ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಬೇಕು.

ದಾಳಿ ನಡೆದ ಕೆಲವೇ ಘಂಟೆಗಳಲ್ಲಿ ನಮ್ಮ ಭಾರತೀಯ ಯೋಧರು ಇಬ್ಬರು ಉಗ್ರರನ್ನು ಗುಂಡಿಕ್ಕಿ ಕೊಂದಿದ್ದಾರೆ.

ದೇಶದಲ್ಲಿ ಉಗ್ರರ ತಾಣವನ್ನು ಬೇರು ಸಮೇತವಾಗಿ ನಾಶ ಮಾಡಬೇಕು. ಇಂದು ಧರ್ಮದ ಹೆಸರು ಕೇಳಿ ಗುಂಡಿಕ್ಕಿದವರು ನಾಳೆ ಜಾತಿ ಹೆಸರಲ್ಲಿ ನಮ್ಮನೆಲ್ಲ ಒಕ್ಕಲೆಬ್ಬಿಸುತ್ತಾರೆ. ಇದಕ್ಕೆ ಅವಕಾಶ ನೀಡದೆ ಹಿಂದುತ್ವ ಉಳಿಸುವುದಕ್ಕೆ ನಾವೆಲ್ಲರೂ ಕೈಜೋಡಿಸಿಬೇಕು ಎಂದು ತಿಳಿಸಿದ್ದಾರೆ.

---

# ದುಷ್ಕೃತ್ಯಗಳಲ್ಲಿ ಭಾಗಿಯಾಗದಿರಿ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿಯ ಶ್ರೀ ಜ.ಫ.ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಪೊಲೀಸ್ ಇಲಾಖೆ ವತಿಯಂದ ಕಳೆದ ವರ್ಷ ಜೂನ್ ತಿಂಗಳಿನಿಂದ ಜಾರಿಯಲ್ಲಿರುವ ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆಯ ಕುರಿತು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಈ ಸಂದರ್ಭದಲ್ಲಿ ಮಾತನಾಡಿದ ಪಿಎಸ್‌ಐ ಚನ್ನಯ್ಯ ದೇವೂರ, ಹೊಸದಾಗಿ ಜಾರಿಯಾಗಿರುವ ಕಾನೂನಿನ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳುವುದು ಅವಶ್ಯವಿದ್ದು, ಅದಕ್ಕಾಗಿಯೇ ಇಲಾಖೆ ವತಿಯಿಂದ ಇಂತಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಹೊಸದಾಗಿ ಜಾರಿಯಾಗಿರುವ ಕಾನೂನಿನಲ್ಲಿ ಸೆಕ್ಷನ್‌ಗಳು ಕಡಿಮೆ. ಆದರೆ, ಶಿಕ್ಷೆಯ ಪ್ರಮಾಣ ಹೆಚ್ಚಿದೆ. ವಿಶೇಷವಾಗಿ ಪೋಕ್ಸೋ ಕಾಯ್ದೆಯ ಬಗ್ಗೆಯೂ ತಿಳಿದುಕೊಳ್ಳಬೇಕು. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ಅಮೂಲ್ಯವಾದ ಸಮಯವನ್ನು ಓದಿನ ಕಡೆಗೆ ಹರಿಸಬೇಕು. ಕಾನೂನಿಗೆ ವಿರುದ್ಧವಾದ ಯಾವುದೇ ದುಷ್ಕೃತ್ಯಗಳಲ್ಲಿ ಭಾಗಿಯಾಗಬಾರದು.

ಕಾಲೇಜುಗಳಲ್ಲಿ ರ್‍ಯಾಗಿಂಗ್ ಮಾಡಬಾರದು, ಸಹಪಾಠಿಗಳೊಡನೆ ಉತ್ತಮ ಬಾಂಧವ್ಯ ಹೊಂದಿರಬೇಕು. ಜೊತೆಗೆ ದುಶ್ಚಟಗಳಿಂದ ಮುಕ್ತರಾಗಿರಬೇಕು. ಸಂಚಾರಿ ನಿಯಮಗಳನ್ನು ಸಹ ಅರ್ಥೈಸಿಕೊಂಡು ಅವುಗಳ ಪಾಲನೆ ಮಾಡಲು ವಿದ್ಯಾರ್ಥಿಗಳು ಮುಂದಾಗಬೇಕೆಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಡಾ. ಅರಹುಣಸಿ, ಉಪನಸ್ಯಾಕರು, ಪೊಲೀಸ್ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

---

# ಕೃಷ್ಣಗೌಡ ಪಾಟೀಲರು ಯುವಕರ ಕಣ್ಮಣಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲರು ಸಂಘಟನಾತ್ಮಕ ನಾಯಕತ್ವದ ವ್ಯಕ್ತಿತ್ವ ಹೊಂದಿದ್ದಾರೆ. ತಮ್ಮ ಅವಿರತ ಶ್ರಮದ ಹಿನ್ನೆಲೆಯಲ್ಲಿ ಸಂಘಟನೆಗೆ ನೀರೆರೆದು ಅದನ್ನು ಶಕ್ತಿಯನ್ನಾಗಿಸಿಕೊಂಡು ಗದಗ ಜಿಲ್ಲಾ ಯುವ ಕಾಂಗ್ರೆಸ್ ಚುನಾಯಿತ ಅಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಯುವ ಸಮುದಾಯದ ಆಧಾರ ಸ್ತಂಭವಾಗಿ ನಿಂತಿದ್ದಾರೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷ ಅಹಮ್ಮದ ಹುಸೇನ ಖಾಜಿ ಅಭಿಪ್ರಾಯಪಟ್ಟರು.

ಇಲ್ಲಿನ ಟರ್ನಲ್ ಪೇಟೆಯ ಶ್ರೀ ರಾಮ ಮಂದಿರದ ಬಳಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಚುನಾಯಿತ ಗದಗ ಜಿಲ್ಲಾ ಅಧ್ಯಕ್ಷ ಕೃಷ್ಣಗೌಡ ಪಾಟೀಲರ ಜನ್ಮದಿನಾಚರಣೆ ಹಿನ್ನೆಲೆಯಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ತಂದೆಯವರು ತಮ್ಮ ಸೃಜನಾತ್ಮಕ ಸಾರ್ವಜನಿಕ ಕಾರ್ಯಗಳ ಮೂಲಕ ರಾಷ್ಟ್ರಮಟ್ಟದ ನಾಯಕರಾಗಿ ಹೊರಹೊಮ್ಮಿದ್ದಾರೆ. ಅಂತೆಯೇ ಕೃಷ್ಣಗೌಡ ಪಾಟೀಲರು ಕೂಡ ಸರಳ ವ್ಯಕ್ತಿತ್ವದ ಮೂಲಕ ಯುವ ಸಮುದಾಯದ ಮನೆ–ಮನವನ್ನು ಗೆದ್ದಿದ್ದಾರೆ. ಅವರ ನಾಯಕತ್ವದಡಿಯಲ್ಲಿ ಸಾರ್ವಜನಿಕ ವಲಯದಲ್ಲಿ ಕಾರ್ಯೋನ್ಮುಖರಾಗಿರುವದು ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಕಾಂಗ್ರೆಸ್ ಯುವ ನಾಯಕ ಬಸವರಾಜ ಚುರ್ಚಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಯುವ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಹಾಜರಿದ್ದರು.

---

## ಮಹಿಳೆಯನ್ನು ಕಾರಿನಲ್ಲಿ ಅಪಹರಿಸಿದ ಪ್ರಕರಣ ಆರೋಪಿಗಳಿಗೆ ಶಿಕ್ಷೆ ಪ್ರಕಟ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

2019ರ ಫೆ.2ರಂದು ಲಕ್ಷ್ಮೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸುಜಾತಾ ಎಂಬ ಮಹಿಳೆಯನ್ನು ಕಾರಿನಲ್ಲಿ ಅಪಹರಿಸಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ 5 ಜನ ಆರೋಪಿಗಳಿಗೆ ನ್ಯಾಯಾಲಯ 4 ವರ್ಷ ಕಠಿಣ ಶಿಕ್ಷೆ ಹಾಗೂ ದಂಡ ವಿಧಿಸಿದೆ.

ಆರೋಪಿಗಳಾದ ಹೆಸರೂರ ಗ್ರಾಮದ ದುರ್ಗಪ್ಪ ಕೆಂಚಪ್ಪ ವಡ್ಡರ, ಗುಲಗೊಂಜಿಕೊಪ್ಪದ ಕರಿಬಸಪ್ಪ ಮುಕಗೌಡರ ವಡ್ಡರ ಮತ್ತು ಸವಣೂರಿನ ಪುಟ್ಟಣ್ಣ ತಿಮ್ಮಣ್ಣ ವಡ್ಡರ ಇವರುಗಳಿಗೆ ತಲಾ 4 ವರ್ಷ ಕಠಿಣ ಶಿಕ್ಷೆ ಹಾಗೂ 20 ಸಾವಿರ ರೂ ದಂಡ ವಿಧಿಸಲಾಗಿದ್ದು, ಇನ್ನುಳಿದ ಇಬ್ಬರು ಆರೋಪಿಗಳಾದ ಹೆಸರೂರಿನ ನಿಂಗಪ್ಪ ಧರ್ಮಣ್ಣ ಶಿಗ್ಗಾವಿ, ಸವಣೂರಿನ ಮಾಂತೇಶ ಬಸಪ್ಪ ಬಡಿಗೇರ ಇವರಿಗೆ 4 ವರ್ಷ ಕಠಿಣ ಶಿಕ್ಷೆ ಹಾಗೂ ತಲಾ 30 ಸಾವಿರ ರೂಗಳ ದಂಡ ವಿಧಿಸಿ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ರಾಜೇಶ್ವರ ಶೆಟ್ಟಿ ಅಂತಿಮ ತೀರ್ಪು ನೀಡಿ ಆದೇಶ ಹೊರಡಿಸಿದ್ದಾರೆ.

ಗದಗ ಸರಕಾರಿ ಅಭಿಯೋಜಕ ಎಮ್.ಬಿ. ದೊಡ್ಡಗೌಡರ ಸಾಕ್ಷಿ ವಿಚಾರಣೆ ನಡೆಸಿ ವಾದ ಮಂಡಿಸಿದ್ದರು.

---

## ಧರ್ಮದ ಹೆಸರಿನಲ್ಲಿ ಭಯೋತ್ಪಾದಕ ದಾಳಿ ನಡೆದಿರುವುದು ನಿಜಕ್ಕೂ ಕೆಟ್ಟ ಬೆಳವಣಿಗೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಧರ್ಮದ ಹೆಸರಿನಲ್ಲಿ ಭಯೋತ್ಪಾದಕ ದಾಳಿ ನಡೆದಿರುವುದು ನಿಜಕ್ಕೂ ಕೆಟ್ಟ ಬೆಳವಣಿಗೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಧರ್ಮದ ಹೆಸರಿನಲ್ಲಿ ಭಯೋತ್ಪಾದಕ ದಾಳಿ ನಡೆದಿರುವುದು ನಿಜಕ್ಕೂ ಕೆಟ್ಟ ಬೆಳವಣಿಗೆ. ಕಾಂಗ್ರೆಸ್ ಪಕ್ಷ ಇದನ್ನು ಖಂಡಿಸುತ್ತದೆ. ಈ ವಿಚಾರದಲ್ಲಿ ನಮ್ಮ ಪಕ್ಷ ಕೇಂದ್ರ ಸರ್ಕಾರದ ಪರ ನಿಲ್ಲುವುದಾಗಿ ತಿಳಿಸಿದೆ. ಕೇಂದ್ರ ಸರ್ಕಾರ ಈ ಭಯೋತ್ಪಾದಕರನ್ನು ಸದೆ ಬಡಿಯಬೇಕು.

---

# ಭಯೋತ್ಪಾದಕ ಕೃತ್ಯಕ್ಕೆ ಖಂಡನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕಾಶ್ಮೀರದ ಅನಂತನಾಗ್ ಜಿಲ್ಲೆಯ ಬೈಸರನ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ಮಂಗಳವಾರ ಏಕಾಏಕಿ ನಡೆಸಿ ಒಟ್ಟು 28 ಜನ ಪ್ರವಾಸಿಗರನ್ನು ಗುಂಡಿಕ್ಕಿ ಕೊಂದಿದ್ದಾರೆ.

ಪತ್ನಿಯ ಎದುರಲ್ಲಿಯೇ ಪತಿಯನ್ನು ಕೊಂದು ಅಟ್ಟಹಾಸ ಮೆರೆದಿರುವ ಭಯೋತ್ಪಾದಕರಿಗೆ ಗಲ್ಲು ಶಿಕ್ಷೆ ಆಗಲಿ ಎಂದು ನಗರಸಭೆಯ ಸ್ಥಾಯಿ ಕಮಿಟಿಯ ಮಾಜಿ ಅಧ್ಯಕ್ಷ ಎಮ್.ಸಿ. ಶೇಖ ಘಟನೆಯನ್ನು ಖಂಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಸ್ಲಾಂ ಧರ್ಮದಲ್ಲಿ ಇಂತಹ ಕೃತ್ಯಕ್ಕೆ ಅವಕಾಶವಿಲ್ಲ. ಇಸ್ಲಾಂ ಧರ್ಮವು ಭಯೋತ್ಪಾದನೆಯನ್ನು ಖಂಡಿಸುತ್ತದೆ. ಇಸ್ಲಾಂ ಧರ್ಮವು ಪರಧರ್ಮವನ್ನು ಪ್ರೀತಿಯಿಂದ ಕಾಣಬೇಕೆಂದು ಕಲಿಸುತ್ತದೆ.

ದಯಾಗುಣನಾದ ಆ ಭಗವಂತನು ನೀನು ಭೂಮಿಯ ಮೇಲಿರುವವರನ್ನು ಕರುಣಿಸು, ನಾನು ನಿನ್ನನ್ನು ಕರುಣಿಸುತ್ತೇನೆ ಎಂದು ಹೇಳುತ್ತದೆ.

ಇಂಥಹ ಇಸ್ಲಾಂ ಧರ್ಮಕ್ಕೆ ಅಪಪ್ರಚಾರ ಮಾಡುವ ಭಯೋತ್ಪಾದಕರಿಗೆ ಗಲ್ಲು ಶಿಕ್ಷೆಯಾಗಲಿ ಎಂದು ಅವರು ಹೇಳಿಕೆ ನೀಡಿದ್ದಾರೆ.

---

# ಪಹಲ್ಗಾಮ್ ದಾಳಿಗೆ ಡಿವೈಎಫ್‌ಐ ಖಂಡನೆ

**■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಕಾಶ್ಮೀರದ ಪಹಲ್ಗಾಮ್ ಸಮೀಪದಲ್ಲಿರುವ ಪ್ರಖ್ಯಾತ ಪ್ರವಾಸಿತಾಣವಾದ ಬೈಸರನ್ ಕಣಿವೆಯಲ್ಲಿ ಮಂಗಳವಾರ ಶಿವಮೊಗ್ಗದ ಮಂಜುನಾಥ್ ಹಾಗೂ ಬೆಂಗಳೂರಿನ ಭರತ್ ಭೂಷಣ್ ಸೇರಿದಂತೆ 28 ಜನ ಪ್ರವಾಸಿಗರನ್ನು ಬಲಿ ಪಡೆದಿರುವ ಭಯೋತ್ಪಾದಕರ ಪೈಶಾಚಿಕ ಕ್ರೌರ್ಯವನ್ನು ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (ಡಿವೈಎಫ್‌ಐ) ಜಿಲ್ಲಾ ಸಮಿತಿ ಖಂಡಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಡಿವೈಎಫ್‌ಐ ಜಿಲ್ಲಾ ಮುಖಂಡ ದಾವಲಸಾಬ ತಾಳಿಕೋಟಿ, ಪ್ರವಾಸಿಗರ ಮೇಲೆ ಭಯೋತ್ಪಾದಕರು ನಡೆಸಿರುವ ದಾಳಿಯು ಆಘಾತಕಾರಿಯಾಗಿದೆ. ಅಮಾಯಕರ ಮೇಲೆ ದಾಳಿಗೈದು



ಹತ್ಯೆ ಮಾಡಿದ ಅಪರಾಧಿಗಳಿಗೆ ತಕ್ಕ ಶಿಕ್ಷೆಯಾಗುವಂತೆ ಕೇಂದ್ರ ಸರಕಾರ ಖಾತ್ರಿಪಡಿಸಬೇಕು.

ಕೇಂದ್ರ ಸರಕಾರ ಜಮ್ಮು–ಕಾಶ್ಮೀರದಲ್ಲಿ ಸಹಜ ಸ್ಥಿತಿಯಿದೆ ಎಂದು ಹೇಳುತ್ತಿದೆಯಾದರೂ, ವಾಸ್ತವ ಪರಿಸ್ಥಿತಿಯಲ್ಲಿ ಅಲ್ಲಿನ ನಿವಾಸಿಗಳು, ವಲಸೆ ಕಾರ್ಮಿಕರು ಹಾಗೂ ಪ್ರವಾಸಿಗರ ಮೇಲೆ ದಾಳಿಗಳು ನಡೆಯುತ್ತಿವೆ. ಆದ್ದರಿಂದ ಕೇಂದ್ರ ಸರಕಾರ ಜಮ್ಮು ಕಾಶ್ಮೀರದಲ್ಲಿ ಸಹಜಸ್ಥಿತಿ ನೆಲೆಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ದೇಶದ ಐಕ್ಯತೆ, ಸೌಹಾರ್ದತೆಗೆ ಕಂಟಕವಾಗಿರುವ ಈ ಭಯೋತ್ಪಾದನೆಯ ವಿರುದ್ಧ ದೇಶದ ಜನತೆ ಒಟ್ಟಾಗಿ ನಿಲ್ಲುವ ಅಗತ್ಯವಿದೆ. ಭಯೋತ್ಪಾದನೆಯನ್ನು ನಿರ್ಮೂಲನೆಗೊಳಿಸಲು ಕೇಂದ್ರ ಸರಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

---


**ಕರ್ನಾಟಕ ಸರ್ಕಾರ (ಜಿಲ್ಲಾ ಪಂಚಾಯತ್, ಗದಗ)**
**ಆಡಳಿತ ವೈದ್ಯಾಧಿಕಾರಿಗಳ ಕಾರ್ಯಾಲಯ**
**ತಾಲೂಕಾ ಆಸ್ಪತ್ರೆ ನರಗುಂದ ತಾ॥ ನರಗುಂದ, ಜಿ ॥ ಗದಗ**
**e-mail : amotlhnrd@gmail.com**
ಕ್ರ.ಸಂ: ತಾ.ಆ.ನ/ಸಿ.ಆರ್/ಹೊ.ಗು/ಟೆಂಡರ್/10/2024–25 ದಿನಾಂಕ : 23–04–2025

**ಟೆಂಡರ್ ಪ್ರಕಟಣೆ**

2025–26 ನೇ ಸಾಲಿಗಾಗಿ ತಾಲೂಕಾ ಆಸ್ಪತ್ರೆ ನರಗುಂದ ಇಲ್ಲಿಗೆ ಅವಶ್ಯವಾಗಿ ಬೇಕಾಗಿರುವ ಗ್ರೂಪ್ "ಡಿ" ಮತ್ತು ನಾನ್ ಕ್ಲಿನಿಕಲ್ ವೃಂದದ ಸಿಬ್ಬಂದಿಗಳ ಸೇವೆಯನ್ನು ಪಡೆಯುವ ಕುರಿತು ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇ–ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in/ ಮೂಲಕ Tender Reference No– DHFWS/2024-25/SE1413 CALL-2 ಸಂಖ್ಯೆಯನ್ನು ಬಳಸಿಕೊಂಡು ಪರಿಶೀಲಿಸಬಹುದಾಗಿದೆ.

**ಸಹಿ/– ಆಡಳಿತ ವೈದ್ಯಾಧಿಕಾರಿಗಳು**
**ತಾಲೂಕ ಆಸ್ಪತ್ರೆ ನರಗುಂದ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/37/2025–26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka